ಸಂಪುಟ : 10 ಸಂಚಿಕೆ: 290 ಪುಟ : 4+2 ಬೆಲೆ: 3.00 ಶುಕ್ರವಾರ ಜನವರಿ 02 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 290 Pages : 4+2 Price : 3.00 Friday January 02 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ



**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಗುರುವಾರ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನವನ್ನು ಆಚರಿಸಲಾಯಿತು.

ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಅವರು ಅಮರಶಿಲ್ಪಿ ಜಕಣಾಚಾರಿಯವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿದರು. ಸುರೇಶ ಅಕ್ಕಸಾಲಿಗರ ಅವರು ಅಮರಶಿಲ್ಪಿ ಜಕಣಾಚಾರಿಯವರ ಕುರಿತು ಉಪನ್ಯಾಸ ನೀಡಿದರು. ಇದೇ ಸಂದರ್ಭದಲ್ಲಿ ಸಮಾಜದ ಹಿರಿಯ ಶಿಲ್ಪಿಗಳನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಧೀಕ್ಷಕ ರಾಜಕುಮಾರ ಸೋಪಡ್ಲಾ, ಮೌನೇಶ ಬಡಿಗೇರ, ಮೌನೇಶ ಅಕ್ಕಸಾಲಿಗರ, ಗೋಪಾಲ ಬಡಿಗೇರ, ಅಶೋಕ ಸುತಾರ, ವೆಂಕಟೇಶ ಸುತಾರ, ಕುಸುಮಾ ಸುತಾರ ಸೇರಿದಂತೆ ಸಮಾಜದ ಗಣ್ಯರು, ಹಿರಿಯರು ಹಾಜರಿದ್ದರು.

### ಇನಾಂ ವೀರಾಪೂರ ಪ್ರಕರಣದಲ್ಲಿ ತ್ವರಿತ, ಪಾರದರ್ಶಕ ತನಿಖೆಗೆ ಕ್ರಮ ವಹಿಸಿ; ಸಚಿವ ಡಾ. ಹೆಚ್.ಸಿ. ಮಹದೇವಪ್ಪ ಸೂಚನೆ

# ವಿಶೇಷ ಕಾನೂನು ರಚನೆಗೆ ಸರ್ಕಾರದಿಂದ ಕ್ರಮ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಹುಬ್ಬಳ್ಳಿ ತಾಲೂಕಿನ ಇನಾಂವೀರಾಪೂರ ಗ್ರಾಮದಲ್ಲಿ ಜರುಗಿರುವ ಘಟನೆಗೆ ಸಂಬಂಧಿಸಿದಂತೆ ಅಂತರ್ಜಾತಿ ವಿವಾಹವಾಗಿದ್ದ ಯುವತಿಯ ಹತ್ಯೆ ಮತ್ತು ದಲಿತ ಕುಟುಂಬದ ಮೇಲೆ ಆಗಿರುವ ದೌರ್ಜನ್ಯದ ಕುರಿತು ಪಾರದರ್ಶಕ ತನಿಖೆ ಕೈಗೊಂಡು ತ್ವರಿತವಾಗಿ ಸರ್ಕಾರಕ್ಕೆ ವರದಿ ಸಲ್ಲಿಸಲು ಸೂಚಿಸಲಾಗಿದೆ. ಇಂತಹ ದುರ್ಘಟನೆಗಳು ಜರುಗದಂತೆ ಇನ್ನಷ್ಟು ಕಠಿಣ ಕ್ರಮ ಕೈಗೊಳ್ಳಲು ಅಗತ್ಯವಿದ್ದರೆ, ಮುಂಬರುವ ಅಧಿವೇಶನದಲ್ಲಿ ವಿಶೇಷ ಕಾನೂನು ರಚನೆಗೆ ಕ್ರಮವಹಿಸಲಾಗುವುದು. ಈ ಕುರಿತು ಜಿಲ್ಲಾಡಳಿತ ವರದಿ ಸಲ್ಲಿಸಲಿ ಎಂದು ಸಮಾಜ ಕಲ್ಯಾಣ ಇಲಾಖೆಯ ಸಚಿವ ಡಾ. ಹೆಚ್.ಸಿ. ಮಹದೇವಪ್ಪ ಹೇಳಿದರು.




ಅವರು ಗುರುವಾರ ಸಂಜೆ ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಭವನದಲ್ಲಿ ಅಧಿಕಾರಿಗಳ ಸಭೆ ಜರುಗಿಸಿ ಮಾತನಾಡಿದರು.

ಆಧುನಿಕ ಸಾಮಾಜದಲ್ಲಿ ಇಂತಹ ಅಮಾನವೀಯ ಘಟನೆ ಜರುಗಬಾರದಿತ್ತು. ಜಿಲ್ಲೆಯಲ್ಲಿ ಜರುಗಿರುವ ಅಂತರ್ಜಾತಿ ವಿವಾಹಗಳ ಕುರಿತು ಮಾಹಿತಿ ಪಡೆಯಬೇಕು. ಸಂಬಂಧಿಸಿದ ಇಲಾಖೆಗಳ ಸಮನ್ವಯ ಸಾಧಿಸಿ, ಜನರಿಗೆ ತಿಳುವಳಿಕೆ ಮತ್ತು ಮನವರಿಕೆ ಮಾಡಿ, ಸಂವಿಧಾನದ ಆಶಯಗಳನ್ನು ತಿಳಿಸಲು ಕ್ರಮವಹಿಸಬೇಕೆಂದು ಅಧಿಕಾರಿಗಳಿಗೆ ಸೂಚಿಸಲಾಗಿದೆ. ದೇಶದ ಕಾನೂನಿನ ಪ್ರಕಾರ ವಯಸ್ಸಿಗೆ ಬಂದ ಯುವಕ-ಯುವತಿಯರು ತಮ್ಮಿಷ್ಟದ ಸಂಗಾತಿಯನ್ನು ಮದುವೆಯಾಗಲು ಯಾವುದೇ ನಿರ್ಬಂಧಗಳಿಲ್ಲ ಎಂದು ಹೇಳಿದರು.

ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಹಾಗೂ ಶಾಸಕ ಅಬ್ಬಯ್ಯ ಪ್ರಸಾದ ಮಾತನಾಡಿ, ಇನಾಂವೀರಾಪೂರ ಗ್ರಾಮದ ಘಟನೆ ಹಿನ್ನೆಲೆಯಲ್ಲಿ, ಇತರ ಸ್ಥಳಗಳಲ್ಲಿ ಇರುವ ಅಂತರ್ಜಾತಿ ವಿವಾಹವಾಗಿರುವ ಕುಟುಂಬಗಳಿಗೆ ಅಗತ್ಯ ಭದ್ರತೆ ಹಾಗೂ ಭರವಸೆ ಮೂಡಿಸಬೇಕು. ಈ ನಿಟ್ಟಿನಲ್ಲಿ ಸಮಾಜ ಕಲ್ಯಾಣ ಇಲಾಖೆ ಕಾರ್ಯಕ್ರಮಗಳನ್ನು ರೂಪಿಸಬೇಕು.

> ಇನಾಂವೀರಾಪೂರ ಪ್ರಕರಣದ ಗಾಯಾಳುಗಳಿಗೆ ಅಗತ್ಯ ಚಿಕಿತ್ಸೆ, ಭದ್ರತೆ, ಪರಿಹಾರ ಕುರಿತು ಪೊಲೀಸ್ ಹಾಗೂ ಜಿಲ್ಲಾಡಳಿತಕ್ಕೆ ಸೂಕ್ತ ನಿರ್ದೇಶನಗಳನ್ನು ನೀಡಲಾಗಿದೆ. ದೌರ್ಜನ್ಯಕ್ಕೆ ಒಳಗಾದ ಕುಟುಂಬದವರು ಪ್ರಕರಣದ ಕುರಿತು ತ್ವರಿತ ತನಿಖೆ, ಪುನರ್ವಸತಿ ಸೌಲಭ್ಯ, ಉದ್ಯೋಗ ಮತ್ತು ಭದ್ರತೆಯನ್ನು ಕೇಳಿದ್ದಾರೆ. ಈ ಕುರಿತು ಕ್ರಮವಹಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಸರ್ಕಾರದ ಹಂತದಲ್ಲಿ ಚರ್ಚಿಸಿ, ಅಗತ್ಯವಿರುವ ಕ್ರಮಗಳನ್ನು ಕೈಗೊಳ್ಳಲಾಗುವುದು.
>
> **– ಡಾ. ಹೆಚ್.ಸಿ. ಮಹದೇವಪ್ಪ.**
> ಸಮಾಜ ಕಲ್ಯಾಣ ಇಲಾಖೆ ಸಚಿವರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ ಮಾತನಾಡಿ, ಘಟನೆ ಜರುಗಿದ ತಕ್ಷಣ ಪೊಲೀಸ್ ಇಲಾಖೆ ಕ್ರಮವಹಿಸಿ, ವಿವೇಕಾನಂದ ದೊಡಮನಿ ಕುಟುಂಬವನ್ನು ರಕ್ಷಿಸಿ, ಅಗತ್ಯ ಚಿಕಿತ್ಸೆ ನೀಡಲು ಕ್ರಮ ವಹಿಸಿದೆ. ಯುವತಿಯನ್ನು ಹತ್ಯೆ ಮಾಡಿದ ಆರೋಪಿಗಳನ್ನು ಬಂಧಿಸಲಾಗಿದೆ. ದೂರಿನಲ್ಲಿರುವ ಇತರ ಆರೋಪಿಗಳ ಬಂಧನಕ್ಕೂ ಕ್ರಮವಹಿಸಲಾಗಿದೆ. ಆರೋಪಿಗಳಿಗೆ ಕಠಿಣ ಶಿಕ್ಷೆಯಾಗುವಂತೆ ಆರೋಪ ಪಟ್ಟಿ (ಚಾರ್ಜ್ ಶೀಟ್) ತಯಾರಿಸಲಾಗುವುದು ಎಂದು ಹೇಳಿದರು.

ದೊಡಮನಿ ಕುಟುಂಬಕ್ಕೆ ಸೂಕ್ತ ರಕ್ಷಣೆ ಮತ್ತು ಅಗತ್ಯ ಸೌಲಭ್ಯಗಳನ್ನು ನೀಡಬೇಕೆಂದು ಹೇಳಿದರು.


ನವಲಗುಂದ ಶಾಸಕ ಎನ್. ಎಚ್. ಕೋನರಡ್ಡಿ ಮಾತನಾಡಿ, ಇನಾಂವೀರಾಪೂರ ಗ್ರಾಮದ ಘಟನೆ ಧಾರವಾಡ ಜಿಲ್ಲೆಯಲ್ಲಿ ಆಗಿರುವುದು ▶▶ 4ನೇ ಪುಟಕ್ಕೆ

### ‘ಶತಚೇತನ’ ಅಭಿನಂದನಾ ಗ್ರಂಥ ಬಿಡುಗಡೆ ಸಮಾರಂಭದಲ್ಲಿ ಮುಕ್ತಿಮಂದಿರ ಶ್ರೀಗಳು

# ತಾಯಿಯ ಋಣ ತೀರಿಸುವುದು ಅಸಾಧ್ಯ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮನೆಯೇ ಮೊದಲ ಪಾಠಶಾಲೆ, ತಾಯಿಯೇ ಮೊದಲ ದೇವರು. ಮಕ್ಕಳ ಶ್ರೇಯೋಭಿವೃದ್ಧಿಗಾಗಿ ಸರ್ವಸ್ವವನ್ನೂ ತ್ಯಾಗ ಮಾಡಿದ ತಾಯಿಯ ಋಣ ತೀರಿಸಲು ಅಸಾಧ್ಯ. ವೃದ್ಧಾಪ್ಯದಲ್ಲಿ ಹೆತ್ತ ತಂದೆ-ತಾಯಿಯರನ್ನು ಮಕ್ಕಳ ಸಮಾನವಾಗಿ ಪ್ರೀತಿ, ವಿಶ್ವಾಸ, ಗೌರವದಿಂದ ಕಾಣುವುದು ಅವರಿಗೆ ಮಾಡುವ ಅಳಿಲು ಸೇವೆಯಾಗಿದೆ ಎಂದು ಮುಕ್ತಿಮಂದಿರ ಧರ್ಮಕ್ಷೇತ್ರದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು ಹೇಳಿದರು.




ಅವರು ಗುರುವಾರ ಪಟ್ಟಣದ ಶ್ರೀ ರಂಭಾಪುರೀ ವೀರಗಂಗಾಧರ ಜಗದ್ಗುರು ಕಲ್ಯಾಣ ಮಂಟಪದಲ್ಲಿ ನಡೆದ ಪ್ರೇಮ್‌ಜೀ ಅಚೀವರ್ಸ್ ‘ಶತಾಯುಷಿ ರತ್ನ’ ಪುರಸ್ಕೃತ ಸಾವಿತ್ರಮ್ಮ ಜಿ.ಹೂವಿನ ಅವರ ಜನ್ಮ ಶತಮಾನ ಸಂಭ್ರಮ ಮತ್ತು ‘ಶತಚೇತನ’ ಅಭಿನಂದನಾ ಗ್ರಂಥ ಬಿಡುಗಡೆ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.


ಹಲವಾರು ದೇವರುಗಳಿದ್ದರೂ ಕಣ್ಣಿಗೆ ಕಾಣುವ ದೇವರು ಮಾತ್ರ ತಾಯಿ. ತಾಯಿಯ ಶುಭ ಹಾರೈಕೆಯೊಂದಿದ್ದರೆ ಎಲ್ಲವೂ ಸಾಧ್ಯ. ಈ ನಿಟ್ಟಿನಲ್ಲಿ ಇಂದಿನ ಯುವ ಜನಾಂಗ ತಂದೆ-ತಾಯಿಯರ ಮಹತ್ವ ಅರಿತು ಬಾಳಬೇಕಾಗಿದೆ. ವೃದ್ಧಾಶ್ರಮಗಳು ನಮ್ಮ ಸಂಸ್ಕೃತಿಯಲ್ಲ. ಅದು ನಾವು ಹೆತ್ತವರಿಗೆ ಮಾಡುವ ಅವಮಾನ ಮತ್ತು ಪಾಪದ ಕೆಲಸ. ಇದರ ಪರಿಣಾಮ ಭವಿಷ್ಯದಲ್ಲಿ ತುಂಬಾ ಕೆಟ್ಟದಾಗಿರುತ್ತದೆ ಎಂದರು.

ಶಾಸಕ ಡಾ. ಚಂದ್ರು ಲಮಾಣಿ ಪ್ರೇಮ್‌ಜೀ ಫೌಂಡೇಶನ್‌ನವರು ನೀಡಿದ ಶತಾಯುಷಿ ರತ್ನ ಪ್ರಶಸ್ತಿ ನೀಡಿ ಗೌರವಿಸಿ ಮಾತನಾಡಿದರು. ಮಾಜಿ ಶಾಸಕರಾದ ಜಿ.ಎಂ. ಮಹಾಂತಶೆಟ್ಟರ, ಜಿ.ಎಸ್. ಗಡ್ಡದೇವರಮಠ ‘ಶತಚೇತನ’ ಅಭಿನಂದನಾ ಗ್ರಂಥ ಬಿಡುಗಡೆಗೊಳಿಸಿ ಮಾತನಾಡಿದರು.

ಮುಖ್ಯ ಅತಿಥಿಗಳಾಗಿದ್ದ ರಾಜ್ಯಪಾಲರ ವಿಶೇಷ ಕಾರ್ಯದರ್ಶಿ ಆರ್. ಪ್ರಭುಶಂಕರ, ನಿವೃತ್ತ ಪೊಲೀಸ್ ಮಹಾನಿರ್ದೇಶಕ ಡಾ. ಬಿ.ಇ. ಉಮಾಪತಿ, ಹಾವೇರಿ ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತ ವೀರಮಲ್ಲಪ್ಪ ಪೂಜಾರ, ನಾಗರತ್ನಮ್ಮ ಪೂಜಾರ, ಲೋಚನೇಶ ಹೂಗಾರ, ಎಸ್.ವಿ. ಪಟ್ಟಣಶೆಟ್ಟಿ, ಡಾ. ಕೆ.ಬಿ. ಹೂಗಾರ, ಎಂ.ಎಂ. ಮರಗಾಲ, ಮಲ್ಲಿಕಾರ್ಜುನ ಕುಂಡೋಜಿ ಸೇರಿದಂತೆ ಪಟ್ಟಣದ ಹಿರಿಯ ನಾಗರಿಕರು, ಗಣ್ಯರು ಉಪಸ್ಥಿತರಿದ್ದರು.

ಡಾ. ಶೇಖರ ಮತ್ತು ಶಿವಾನಂದ ಹೂವಿನ ಸ್ವಾಗತಿಸಿದರು. ಕಸಾಪ ತಾಲೂಕಾಧ್ಯಕ್ಷ ಈಶ್ವರ ಮೆಡ್ಲೇರಿ, ಬಿ.ಎಂ. ಕುಂಬಾರ, ಡಿ.ಎಚ್. ಪಾಟೀಲ ನಿರೂಪಿಸಿದರು.

> ಹೆತ್ತವರ ಬಗ್ಗೆ ಇನ್ನೂ ಪೂಜ್ಯನೀಯ ಭಾವ ನಮ್ಮ ಹಿರಿಯರಲ್ಲಿದೆ. ಈ ಸಂಸ್ಕಾರ, ಮೌಲ್ಯಗಳು ಯುವಕರಿಗೆ, ಮಕ್ಕಳಿಗೆ ಪ್ರೇರಣೆಯಾಗಬೇಕು. ಈ ನಿಟ್ಟಿನಲ್ಲಿ ಲಕ್ಷ್ಮೇಶ್ವರದ ಹೂವಿನ ಕುಟುಂಬ ಸಾವಿತ್ರಮ್ಮ ಅವರು ಮಕ್ಕಳಿಗೆ ಉತ್ತಮ ಶಿಕ್ಷಣ, ಸಂಸ್ಕಾರ, ಮೌಲ್ಯಗಳನ್ನು ಬಿತ್ತುವ ಮೂಲಕ ಶೈಕ್ಷಣಿಕ, ಸಾಮಾಜಿಕ, ಧಾರ್ಮಿಕ ಸೇವೆಗಳ ಮೂಲಕ ಸಾರ್ಥಕ ಬದುಕಿನೊಂದಿಗೆ ಸಮಾಜಕ್ಕೆ ಮಾದರಿಯಾಗಿದ್ದಾರೆ ಎಂದು ಮುಕ್ತಿಮಂದಿರ ಶ್ರೀಗಳು ಹೇಳಿದರು.



ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ನವೀಕೃತ ಆಡಳಿತ ಕಚೇರಿಯನ್ನು ಗುರುವಾರ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್.ಎಸ್. ನೀಲಗುಂದ, ಜಿಲ್ಲಾ ಕುಷ್ಟರೋಗ ನಿಯಂತ್ರಣಾಧಿಕಾರಿ ಡಾ. ರಾಜೇಂದ್ರ ಬಸರಿಗಿಡದ, ಜಿಲ್ಲಾ ಆರ್.ಸಿ.ಎಚ್ ಅಧಿಕಾರಿ ಡಾ. ಮೀನಾಕ್ಷಿ ಕೆ.ಎಸ್, ಜಿ.ಪಂ ಮುಖ್ಯ ಲೆಕ್ಕಾಧಿಕಾರಿ ಜೆ.ಸಿ. ಪ್ರಶಾಂತ, ಜಿ.ಪಂ ಮುಖ್ಯ ಯೋಜನಾಧಿಕಾರಿ ಎ.ಎ. ಕಂಬಾಳಿಮಠ, ಡಿಆರ್‌ಡಿಎ ಯೋಜನಾ ನಿರ್ದೇಶಕ ಎಂ.ವಿ. ಚಳಗೇರಿ ಹಾಗೂ ನಿರ್ಮಿತಿ ಕೇಂದ್ರದ ಜಿ.ವಿ. ಶಿರೋಳ ಮತ್ತು ಆರೋಗ್ಯ ಇಲಾಖೆಯ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಮರ್ಯಾದಾ ಹತ್ಯೆ ನಾಗರಿಕ ಸಮಾಜಕ್ಕೆ ಶಾಪ




**■ವಿಜಯಸಾಕ್ಷಿ ಸುದ್ದಿ, ಗದಗ**

ಸರಕಾರ ರಾಜಕೀಯ ಸೋಗಲಾಡಿತನ ಬಿಟ್ಟು ಸಮಾಜದಲ್ಲಿ ಮರ್ಯಾದಾ ಹತ್ಯೆಯಂತಹ ಘೋರ ಕೃತ್ಯಗಳನ್ನು ತಡೆಯಲು ಕೂಡಲೇ ಕಠಿಣ ಕಾನೂನು ಜಾರಿಗೆ ತರಬೇಕು ಎಂದು ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾಧ್ಯಕ್ಷ ಅಶೋಕ ಬರಗುಂಡಿ ಒತ್ತಾಯಿಸಿದರು.

ಗುರುವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮರ್ಯಾದಾ ಹತ್ಯೆಗಳು ನಾಗರಿಕ ಸಮಾಜಕ್ಕೆ ಶಾಪವಾಗಿವೆ. ಇಂತಹ ಪ್ರಮಾದಗಳು ಮರುಕಳಿಸದಂತೆ ತಡೆಯುವುದೇ ನಾವು ಮಾನವೀಯತೆಗೆ ನೀಡುವ ನಿಜವಾದ ಗೌರವ. ಕೊಲೆ ಮಾಡಿದವರು ಮಾತ್ರವಲ್ಲದೆ, ಅಂತಹ ಕೃತ್ಯಕ್ಕೆ ಪ್ರಚೋದನೆ ನೀಡಿದವರಿಗೂ ಕಠಿಣ ಶಿಕ್ಷೆಯಾಗಬೇಕು ಎಂದು ಅವರು ಆಗ್ರಹಿಸಿದರು.

ಈ ನಾಡಿನ ಲಿಂಗಾಯತ ಸಮುದಾಯಗಳು ಬುದ್ಧ, ಬಸವ ಮತ್ತು ಅಂಬೇಡ್ಕರ್ ಅವರ ಚಿಂತನೆಗಳನ್ನು ಮೈಗೂಡಿಸಿಕೊಳ್ಳಬೇಕು. ನಮ್ಮ ಪರಿಸರವನ್ನು ಜಾಗೃತವಾಗಿರಿಸಿಕೊಂಡು, ನಾಡನ್ನು ಶಾಂತಿಯ ತೋಟವನ್ನಾಗಿ ಮಾಡುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ.

ಎಲ್ಲ ಭೇದ-ಭಾವಗಳನ್ನು ಸುಡುವ ಶಕ್ತಿ ಇರುವುದು ಕೇವಲ ಪ್ರೀತಿ ಎಂಬ ಮಂತ್ರಕ್ಕೆ ಮಾತ್ರ ಎನ್ನುವುದನ್ನು ಅರ್ಥ ಮಾಡಿಕೊಳ್ಳಬೇಕು ಎಂದರು.

ಹುಬ್ಬಳ್ಳಿ ತಾಲೂಕಿನ ಇನಾಂವೀರಾಪುರ ಗ್ರಾಮದಲ್ಲಿ ಗರ್ಭಿಣಿ ಯುವತಿಯ ಮರ್ಯಾದಾ ಹತ್ಯೆ ಖಂಡಿಸಿ, ಜಾಗತಿಕ ಲಿಂಗಾಯತ ಮಹಾಸಭಾ, ದಲಿತ ಪರ ಸಂಘಟನೆಗಳು ಹಾಗೂ ಪ್ರಗತಿಪರ ಸಂಘಟನೆಗಳ ಸಹಯೋಗದಲ್ಲಿ ಜ. 2ರಂದು ಬೆಳಿಗ್ಗೆ 10 ಗಂಟೆಗೆ ಗಾಂಧಿ ವೃತ್ತದಲ್ಲಿ ಪ್ರಾಯಶ್ಚಿತ್ತ ದಿನ ಆಚರಿಸಲಾಗುವುದು. ಈ ಮೂಲಕ ಸಮಾಜದಲ್ಲಿ ಶಾಂತಿ ಮತ್ತು ಸಾಮರಸ್ಯದ ಸಂದೇಶ ಸಾರಲಾಗುವುದು ಎಂದು ಬರಗುಂಡಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಕೆ.ಎಸ್. ಚಟ್ಟಿ, ಶೇಖಣ್ಣ ಕವಳಿಕಾಯಿ, ಗೌರಕ್ಕ ಬಡಿಗಣ್ಣವರ, ಶ್ರೀದೇವಿ ಶೆಟ್ಟರ್, ಶರೀಫ್ ಬಿಳೆಯಲಿ, ಮುತ್ತು ಬಿಳೆಯಲಿ, ಮಾರ್ತಾಂಡ ಹಾದಿಮನಿ ಉಪಸ್ಥಿತರಿದ್ದರು.

### ಆಸ್ಕ್ ನ್ಯೂಸ್ 2026ರ ವರ್ಣರಂಜಿತ ಪಾಕೆಟ್ ಕ್ಯಾಲೆಂಡರ್ ಬಿಡುಗಡೆ

# ಪಾಕೆಟ್ ಕ್ಯಾಲೆಂಡರ್ ಮಾದರಿಯಾಗಿದೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಸಮಾಜಮುಖಿ ಚಿಂತನೆ, ಹೊಸತನ, ಆಕರ್ಷಣೆಯೊಂದಿಗೆ ಮುದ್ರಣಗೊಂಡಿರುವ ‘ಆಸ್ಕ್ ನ್ಯೂಸ್’ 2026ರ ವರ್ಣರಂಜಿತ ಪಾಕೆಟ್ ಕ್ಯಾಲೆಂಡರ್ ಎಲ್ಲರಂತಲ್ಲ ಎಂದು ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಅಭಿಪ್ರಾಯಪಟ್ಟರು.

ಅವರು ಆಸ್ಕ್ ನ್ಯೂಸ್ 2026ರ ವರ್ಣರಂಜಿತ ಪಾಕೆಟ್ ಕ್ಯಾಲೆಂಡರ್ ಬಿಡುಗಡೆಗೊಳಿಸಿ ಮಾತನಾಡಿ, ಪೇಪರ್‌ಲೆಸ್ ವ್ಯವಸ್ಥೆಯ ಮಧ್ಯೆ ಡಿಜಿಟಲ್ ಯುಗದಲ್ಲಿ ತೂಗು ಕ್ಯಾಲೆಂಡರ್ ಸೇರಿ ಬೇರೆ ಬೇರೆ ಕ್ಯಾಲೆಂಡರ್‌ಗಳು ಹೊಂದಿರುವ ಎಲ್ಲ ಮಾಹಿತಿಯನ್ನು ಸೆರೆ ಹಿಡಿಯುವ ಜೊತೆಗೆ ಅತ್ಯಮೂಲ್ಯ ಚಿಂತಕರ ಸುಭಾಷಿತ ವಿಚಾರಗಳನ್ನು ಅಳವಡಿಸಿರುವ ಪಾಕೆಟ್ ಕ್ಯಾಲೆಂಡರ್ ನಿಜಕ್ಕೂ ಮಾದರಿಯಾಗಿದೆ ಎಂದರು.



ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ರಾಜ್ಯ ಹಿರಿಯ ನಿಕಟಪೂರ್ವ ಉಪಾಧ್ಯಕ್ಷ ರವಿ ಎಲ್.ಗುಂಜೀಕರ ಮಾತನಾಡಿ, ಹೊಸ ಯೋಜನೆಗೆ, ಯೋಚನೆಗೆ, ಆಲೋಚನೆಗೆ, ಸಾಮಾಜಿಕ ಚಿಂತನೆಗೆ ಮಾದರಿಯಾಗಿರುವ ಆಸ್ಕ್ ನ್ಯೂಸ್ ಚಾನಲ್ ಹೊರತಂದಿರುವ 2026ರ ಪಾಕೆಟ್ ಕ್ಯಾಲೆಂಡರ್ ಅತ್ಯಂತ ಅರ್ಥಗರ್ಭಿತವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಖ್ಯಾತ ಹೋಮಿಯೋಪತಿ ವೈದ್ಯ ಡಾ. ಎಸ್.ವ್ಹಿ. ಶಿವನಗೌಡರ ಮಾತನಾಡಿ, ಅಂದವಾಗಿ ಮೂಡಿಬಂದಿರುವ ಆಸ್ಕ್ ನ್ಯೂಸ್ 2026ರ ವರ್ಣರಂಜಿತ ಪಾಕೆಟ್ ಕ್ಯಾಲೆಂಡರ್ ಇತರರಿಗೆ ಮಾದರಿಯಾಗಿದೆ ಎಂದು ಅಭಿಪ್ರಾಯಪಟ್ಟರು.

ಹಿರಿಯ ಪತ್ರಕರ್ತ ಆನಂದ ಸಾಲಿಗ್ರಾಮ ಮಾತನಾಡಿ, ಹಿಂದೆ ಜನಪ್ರಿಯವಾಗಿದ್ದ ಪಾಕೆಟ್ ಕ್ಯಾಲೆಂಡರ್ ಇತ್ತೀಚೆಗೆ ಮರೆಯಾಗಿತ್ತು. ಮತ್ತೆ ಪಾಕೆಟ್ ಕ್ಯಾಲೆಂಡರ್ ಟ್ರೆಂಡ್‌ಗೆ ಆಸ್ಕ್ ನ್ಯೂಸ್ ಮುನ್ನುಡಿ ಬರೆದಂತಿದೆ ಎಂದರು.

ರೈಜ್ ಆಫ್ ಗದಗ ಸಂಪಾದಕ ಆನಂದಯ್ಯ ವಿರಕ್ತಮಠ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು. ಆಸ್ಕ್ ನ್ಯೂಸ್ ಸಂಪಾದಕ ಡಾ. ಅನಂತ ಎಸ್.ಕಾರ್ಕಳ ಪ್ರಾಸ್ತಾವಿಕವಾಗಿ ಮಾತನಾಡಿದರು. ಕೊನೆಯಲ್ಲಿ ನ್ಯಾಯವಾದಿ ಟಿ.ಎನ್. ಭಾಂಡಗೆ ವಂದಿಸಿದರು.

> ಗಣ್ಯ ವರ್ತಕರಾದ ಈಶ್ವರಸಾ ಮೇರವಾಡೆ ಮಾತನಾಡಿ, ತಮ್ಮ ಪರಿಚಯ, ಬ್ಲಡ್ ಗ್ರುಪ್, ಕಛೇರಿ, ಮನೆ ವಿಳಾಸ, ವಾಹನ ಸಂಖ್ಯೆ, ಆಧಾರ್ ಕಾರ್ಡ್ ಸಂಖ್ಯೆ ಸೇರಿ ತಮ್ಮ ಬಯೋಡಾಟಾವನ್ನು ಪಾಕೆಟ್ ಕ್ಯಾಲೆಂಡರ್‌ನಲ್ಲಿ ಅಳವಡಿಸಿಕೊಳ್ಳುವಂತೆ ವ್ಯವಸ್ಥೆ ಹೊಂದಿರುವ ಆಸ್ಕ್ ನ್ಯೂಸ್ 2026ರ ಪಾಕೆಟ್ ಕ್ಯಾಲೆಂಡರ್ ಉಪಯುಕ್ತವಾಗಿದೆ ಎಂದರು.



ಲಕ್ಷ್ಮೇಶ್ವರದ ಸರ್ಕಾರಿ ಹೆಣ್ಣು ಮಕ್ಕಳ ಪ್ರಾಥಮಿಕ ಶಾಲೆಯಲ್ಲಿ ಗುರುವಾರ ಅಮರ ಶಿಲ್ಪಿ ಜಕಣಾಚಾರಿ ಅವರ ಜಯಂತ್ಯುತ್ಸವ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಶಿಕ್ಷಕ ವೃಂದದವರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ರೇಣುಕಾ ಯಲ್ಲಮ್ಮ ಜಾತ್ರಾ ಮಹೋತ್ಸವ ನಾಳೆ

■ವಿಜಯಸಾಕ್ಷಿ ಸುದ್ದಿ, ಮುಳಗುಂದ



ಪಟ್ಟಣ ಸಮೀಪದ ನಾಗಾವಿ ಗ್ರಾಮದ ಆರಾಧ್ಯ ದೇವಿ ರೇಣುಕಾ ಯಲ್ಲಮ್ಮ ದೇವಿಯ 74ನೇ ಜಾತ್ರಾ ಮಹೋತ್ಸವ ಜ.3ರಂದು ಜರುಗಲಿದ್ದು, ಸಾಯಂಕಾಯ 5.30ಕ್ಕೆ ಮಾ ಹಾರಥೋತ್ಸವ, ಜ.4ರಂದು ಸಾಯಂಕಾಲ 5.30ಕ್ಕೆ ಕಡುಬಿನ ಕಾಳಗ (ಲಘು ರಥೋತ್ಸವ) ಜರುಗುವುದು.

ಜ. 3ರಂದು ರಾತ್ರಿ 10.30ಕ್ಕೆ ನಾಗಾವಿ ಬಸವೇಶ್ವರ ಬಜನಾ ಸಂಘದವರಿಂದ 'ಮಾನುಳ್ಳವರ ಮನೆತನ' ನಾಟಕ ಪ್ರದರ್ಶನವು ರೇಣುಕಾ ನಾಟ್ಯ ಮಂದಿರದಲ್ಲಿ ನಡೆಯಲಿದೆ. ಜ.3 ಮತ್ತು 4ರಂದು ಮಾರುತಿ ಯುವ ಸಂಘ, ಬೀರೇಶ್ವರ ಯುವಕ ಸಂಘ, ರೇಣುಕಾ ಯುವಕ ಸಂಘ, ಸೇವಾಲಾಲ ಯುವಕ ಸಂಘ ನಾಗಾವಿ ತಾಂಡಾ ಇವರ ಸಂಯುಕ್ತ ಆಶ್ರಯದಲ್ಲಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಧ್ಯಾಹ್ನ 2.30ಕ್ಕೆ ಬಯಲು ಜಂಗಿ ಕುಸ್ತಿ ಜರುಗುವವು.

ಜ. 4ರಂದು ರಾತ್ರಿ 9 ಗಂಟೆಗೆ ಡಿಎಸ್ಎಸ್ ಸಂಘಟನೆಯಿಂದ ಪುನಿತ ಮೆಲೋಡಿಸ್ ಇವರಿಂದ ರಸಮಂಜರಿ ಕಾರ್ಯಕ್ರಮ ಜರುಗಲಿದೆ ಎಂದು ದೇವಸ್ಥಾನದ ಕಮಿಟಿ ಸದಸ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಎಸ್.ಎಸ್. ಕಳಸಾಪುರಶೆಟ್ರು– ಒಂದು ನೆನಪು

# ಮರಳಿ ಬಾರದ ಲೋಕಕ್ಕೆ ಕಳಸಾಪುರಶೆಟ್ರು

ಅನಾರೋಗ್ಯದ ಹಿನ್ನೆಲೆಯಲ್ಲಿ ನಗರದ ಹಿರಿಯರಾದ ಎಸ್.ಎಸ್. ಕಳಸಾಪುರಶೆಟ್ರು ಅಕಾಲಿಕವಾಗಿ ತಮ್ಮ 73ನೇ ವಯಸ್ಸಿನಲ್ಲಿ ಖಾಸಗಿ ಆಸ್ಪತ್ರೆಯಲ್ಲಿ ನಿಧನ ಹೊಂದಿರುವುದು ಅವಳಿ ನಗರಕ್ಕೆ ಮತ್ತು ಉತ್ತರ ಕರ್ನಾಟಕದ ಅವರ ಅಭಿಮಾನಿಗಳಿಗೆ ತುಂಬಲಾರದ ಹಾನಿಯಾಗಿದೆ.

ಪ್ರಗತಿಪರ ವಿಚಾರವಾದಿಗಳು, ಚಿಂತಕರಾಗಿದ್ದ ಗದುಗಿನ ಶಿವರುದ್ರಪ್ಪ ಸಿದ್ದಲಿಂಗಪ್ಪ ಕಳಸಾಪೂರಶೆಟ್ಟರೆಂದರೆ ಗದಗ, ಧಾರವಾಡ ಜಿಲ್ಲೆಗೆ ಚಿರಪರಿಚಿತರು. ಇವರು ಎಡೆಯೂರು ಸ್ವಾಮಿ ಸಿದ್ಧಲಿಂಗೇಶ್ವರರ ಪರಮಭಕ್ತರಾಗಿದ್ದು, ಗದುಗಿನ ತೋಂಟದಾರ್ಯ ಶ್ರೀಗಳವರ ಖಾಸಾ ಭಕ್ತರಾಗಿದ್ದರು.

ಪೂಜ್ಯ ತೋಂಟದಾರ್ಯ ಜಗದ್ಗುರುಗಳವರು ಪ್ರತಿವರ್ಷ ತೋಂಟ–ದಾರ್ಯ ಜಾತ್ರಾ ಮಹೋತ್ಸವದಂದು ಶ್ರೀ ಕಳಸಾಪೂರ ಶೆಟ್ಟರ ಮನೆಯಲ್ಲಿಯೇ ಪೂಜೆ–ಪ್ರಸಾದ ತೀರಿಸಿಕೊಂಡು ಶ್ರೀಮಠಕ್ಕೆ ಆಗಮಿಸಿದ ನಂತರ ಶ್ರೀಮಠದ ತೇರು ಸಾಗುವದು. ಈ ಪದ್ಧತಿ ಕಳೆದ ಸುಮಾರ 250 ವರ್ಷಗಳಿಂದ ನಿರಂತರವಾಗಿ ನಡೆದುಕೊಂಡು ಬಂದಿದೆ. ತಮ್ಮ ಕಷ್ಟದ ಪರಿಸ್ಥಿತಿಯಲ್ಲಿಯೂ ಈ ಮನೆತನದವರು ಈ ಪರಂಪರೆಯನ್ನು ಬಹಳ ಭಕ್ತಿ–ಶ್ರದ್ಧೆ–ಅಭಿಮಾನದಿಂದ ನಡೆಸಿಕೊಂಡು ಬಂದಿದ್ದಾರೆ.

ಸೇವೆ ಮತ್ತು ತ್ಯಾಗಕ್ಕೆ ಹೆಸರಾದ ಶಿವರುದ್ರಪ್ಪನವರು ಜಗದ್ಗುರು ತೋಂಟ–ದಾರ್ಯ ಸಂಸ್ಥಾನಮಠದ ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳಾಗಿ ತಮ್ಮನ್ನು ತಾವು ಸಕ್ರಿಯವಾಗಿ ತೊಡಗಿಸಿಕೊಂಡು, ಜಾತ್ರಾ ಮಹೋತ್ಸವ ಇರಲಿ, ಶಿವರಾತ್ರಿ ಕಾರ್ಯಕ್ರಮ ಇರಲಿ, ದಸರಾ ಮಹೋತ್ಸವ ಇರಲಿ, ಪುರಾಣ ಪ್ರವಚನ ಇರಲಿ, ಶ್ರಾವಣ ಮಾಸದ ಕಾರ್ಯಕ್ರಮ ಇರಲಿ, ಯಾವದೇ ಶ್ರೀಮಠದ ಶಿಕ್ಷಣ ಸಂಸ್ಥೆ ಕಾರ್ಯಕ್ರಮವಿರಲಿ ಅವುಗಳಲ್ಲಿ ಕ್ರಿಯಾಶೀಲರಾಗಿ ಬಹಳ ಅಭಿಮಾನದಿಂದ ಸೇವೆ ಸಲ್ಲಿಸಿದ್ದಾರೆ.

50 ವರ್ಷಗಳ ಹಿಂದೆ ಪೂಜ್ಯ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು ಉತ್ತರಕರ್ನಾಟಕದಿಂದ ಎಡೆಯೂರು ಸ್ವಾಮಿ ಸಿದ್ಧಲಿಂಗೇಶ್ವರರ ಕ್ಷೇತ್ರಕ್ಕೆ ಉತ್ತರ ಕರ್ನಾಟಕದ ವಿವಿಧ ಊರುಗಳಿಂದ ಪಾದಯಾತ್ರೆ ಪ್ರಾರಂಭಿಸಿದರು. ಗದುಗಿನ ಮಾರ್ಗವಾಗಿ ಎಡೆಯೂರಿಗೆ ಹೋಗುವಾಗ ಈ ಪಾದಯಾತ್ರಾ ಮಂಡಳಿಗೆ ಶ್ರೀ ಕಳಸಾಪುರ ಶೆಟ್ರು



ಬಹಳ ಭಕ್ತಿಯಿಂದ ಸಹಾಯ ಮಾಡುತ್ತ, ಕೊನೆಗೆ ಪಾದಯಾತ್ರೆ ಮುಕ್ತಾಯದ ದಿನ ಎಡೆಯೂರು ಕ್ಷೇತ್ರಕ್ಕೆ ಕೂಡಾ ಹೋಗಿಬರುತ್ತಿದ್ದರು.

ಬಸವಣ್ಣನವರ ಐಕ್ಯಸ್ಥಳವಾದ ಕೂಡಲಸಂಗಮದಲ್ಲಿ ಎಸ್.ಎಂ. ಜಾಮದಾರ ಅವರ ಮಾರ್ಗದರ್ಶನದಲ್ಲಿ ಇವರು ಹಾಗೂ ಇವರ ಸಹೋದರ ಶೇಖಣ್ಣ ಇವರು ಒಳ್ಳೆಯ ಗುತ್ತಿಗೆದಾರರಾಗಿ ಸೇವೆಯನ್ನು ಸಲ್ಲಿಸಿದ್ದಾರೆ.

ಶ್ರೀಯುತರು ಮಾಜಿ ಪ್ರಧಾನ ಮಂತ್ರಿಗಳಾದ ಹೆಚ್.ಡಿ. ದೇವೆಗೌಡರು, ಹಿಂದಿನ ಮುಖ್ಯಮಂತ್ರಿಗಳಾದ ಎಸ್. ಆರ್. ಬೊಮ್ಮಾಯಿ, ಬಸವರಾಜ ಬೊಮ್ಮಾಯಿ, ಎಂ.ಪಿ.ಪ್ರಕಾಶ್ ಮತ್ತು ಇಂದಿನ ಪ್ರಗತಿಪರ ಚಿಂತನೆಯ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯನವರ ಆಪ್ತರು. ಆ ಕಾರಣಕ್ಕಾಗಿ ಎಸ್.ಆರ್. ಬೊಮ್ಮಾಯಿಯವರು ರಾಜ್ಯಸಭಾ ಸದಸ್ಯರಾಗಿದ್ದಾಗ 2000ನೇ ಇಸ್ವಿಯಲ್ಲಿ 5 ಲಕ್ಷ ರೂಪಾಯಿಗಳ ಅನುದಾನವನ್ನು ಶ್ರೀ ತೋಂಟದಾರ್ಯ ಶಿಕ್ಷಣ ಸಂಸ್ಥೆಗೆ ಕೊಡಿಸಿದ ಶ್ರೇಯಸ್ಸು ಇವರಿಗೆ ಸಲ್ಲುತ್ತದೆ. ಆಳಂದದ ಇಂದಿನ ಶಾಸಕರಾದ ಬಿ.ಆರ್. ಪಾಟೀಲ, ಕುಷ್ಟಗಿ ಮಾಜಿ ಶಾಸಕರಾದ ಕೆ. ಶರಣಪ್ಪ, ಗದುಗಿನ ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಸಚಿವರಾದ ಎಚ್. ಕೆ. ಪಾಟೀಲ, ಶಿವಾನಂದ ಪಾಟೀಲ, ಸಂಸದರಾದ ರಮೇಶ ಜಿಗಜಿಣಗಿ, ಗೋವಿಂದ ಕಾರಜೋಳ, ಮಾಜಿ ಸಚಿವರಾದ ಸಿ.ಸಿ. ಪಾಟೀಲ, ಕಳಕಪ್ಪ ಬಂಡಿ, ಮಾಜಿ ಸಚಿವರಾದ ಎಸ್.ಎಸ್. ಪಾಟೀಲ, ಎಸ್.ಎಸ್. ಕಡಪಟ್ಟಿ, ಮಾಜಿ ಸಂಸದರಾದ ಕೆ.ಎಸ್. ವೀರಭದ್ರಪ್ಪ, ಆರ್. ಎಸ್. ಪಾಟೀಲ, ಶಿವಕುಮಾರ ಉದಾಸಿ, ಮಾಜಿ ಶಾಸಕರಾದ ಹುಂಬರವಾಡಿ, ಶಲವಡಿ ಶಂಕರಗೌಡ್ರ, ಶ್ರೀಶೈಲಪ್ಪ ಬಿದರೂರ, ಸಭಾಪತಿಗಳಾದ ಬಸವರಾಜ ಹೊರಟ್ಟಿ, ಎಸ್.ವಿ. ಸಂಕನೂರ, ಕೆ.ಎಮ್. ಎಫ್ ಮಾಜಿ ಅಧ್ಯಕ್ಷ ನೀಲಕಂಠ ಅಸೂಟಿ, ಎಂ.ಆರ್. ಪಾಟೀಲ, ಹಿರೇಗೌಡ್ರ, ಲಕ್ಷ್ಮೇಶ್ವರದ ಟಿ.ಈಶ್ವರ ನಾಡಿನ ಹಿರಿಯ ಸಂಶೋಧಕರಾದ ಡಾ. ಎಂ.ಎಂ. ಕಲಬುರ್ಗಿ ಹಾಗೂ ಅನೇಕ ಸಮಾಜಮುಖಿ ಗಣ್ಯರ ಆಪ್ತ ವಲಯದಲ್ಲಿ ಇದ್ದವರು.

ಪೂಜ್ಯ ಲಿಂಗೈಕ್ಯ ಸಿದ್ದಲಿಂಗ ಮಹಾಸ್ವಾಮಿಗಳ ಕಾಲದಲ್ಲಿ ಮತ್ತು ಅವರು ಲಿಂಗೈಕ್ಯರಾದಾಗ ಅಪಾರವಾದ ಸೇವೆಯನ್ನು ಸಲ್ಲಿಸಿದ್ದಾರೆ. ಅದೇ ರೀತಿ ಇಂದಿನ ಪೂಜ್ಯರೊಂದಿಗೆ ಆಪ್ತವಾದ ಸಂಬಂಧವನ್ನು ಹೊಂದಿದ್ದರು. ಕಳೆದ ನಾಲ್ಕು ದಶಕಗಳಿಂದ ನನ್ನ ಜೊತೆ ಒಡನಾಟ ಹೊಂದಿದ ಇವರ ಅಗಲಿಕೆಯು ತುಂಬಲಾರದ ನಷ್ಟವಾಗಿದ್ದು, ಅವರ ಆತ್ಮಕ್ಕೆ ಬಸವಾದಿ ಪ್ರಮಥರು ಚಿರಶಾಂತಿಯನ್ನು ನೀಡಲಿ ಮತ್ತು ಅವರ ಕುಟುಂಬದ ಸದಸ್ಯರಿಗೆ ದುಃಖವನ್ನು ಸಹಿಸುವ ಶಕ್ತಿಯನ್ನು ನೀಡಲಿ.

–**ಪ್ರೊ. ಶಿವಾನಂದ ಎಸ್.ಪಟ್ಟಣಶೆಟ್ಟರ**,
ಕಾರ್ಯದರ್ಶಿಗಳು,
ಜಗದ್ಗುರು ತೋಂಟದಾರ್ಯ
ವಿದ್ಯಾಸಂಸ್ಥೆ, ಗದಗ.

### ಕಸಾಪ ವತಿಯಿಂದ ವಿಶ್ವಮಾನವ ದಿನ ಆಚರಣೆ

# ಕುವೆಂಪು ಕೃತಿಗಳಲ್ಲಿ ವಿಶ್ವಮಾನವ ದರ್ಶನ




ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಮನುಜಮತವನ್ನು ಉತ್ತೇಜಿಸಿ, ಮೌಢ್ಯದಿಂದ ಮುಕ್ತವಾದ ಆಧ್ಯಾತ್ಮಿಕತೆಯನ್ನು ಪ್ರಚಾರ ಮಾಡಿದರು. ಭಾಷಾ ಸಾಂಸ್ಕೃತಿಕ ಐಕ್ಯತೆಯನ್ನು ಬೆಳೆಸಿ, ವಿಶ್ವಪಥದತ್ತ ಹೆಜ್ಜೆ ಹಾಕುವಂತೆ ಪ್ರೇರೇಪಿಸಿದರು. ಸಾಹಿತ್ಯವನ್ನು ಸಾಮಾಜಿಕ ಕ್ರಾಂತಿಯ ಸಾಧನವನ್ನಾಗಿ ಮಾಡಿದರು ಎಂದು ತಿಳಿಸಿದರು.

■ವಿಜಯಸಾಕ್ಷಿ ಸುದ್ದಿ, ಗದಗ

20ನೇ ಶತಮಾನದ ಶ್ರೇಷ್ಠ ಸಾಹಿತಿ ಕುವೆಂಪು. ಯುಗದ ಕವಿಯಾಗಿ, ಜಗದ ಕವಿಯಾಗಿ ವಿಶ್ವಮಾನವ ದರ್ಶನವನ್ನು ತಮ್ಮ ಕೃತಿಗಳ ಮೂಲಕ ಮಾಡಿಸಿದ್ದಾರೆ. ಮನುಷ್ಯ ಜಾತಿ, ಧರ್ಮ, ಭಾಷೆ ಮತ್ತು ಗಡಿಗಳನ್ನು ಮೀರಿ ಬೆಳೆಯಬೇಕು. ಸಂಕುಚಿತ ಮನಸ್ಥಿತಿ ಎಲ್ಲ ಸಮಸ್ಯೆಗಳಿಗೆ ಕಾರಣವಾಗಿದೆ ಎಂದು ಕುವೆಂಪು ಪ್ರತಿಪಾದಿಸಿರುವುದಾಗಿ ರಾಷ್ಟ್ರಪ್ರಶಸ್ತಿ ಪುರಸ್ಕೃತ ಶಿಕ್ಷಕಿ ಎಸ್.ಎಂ. ಕಾತರಕಿ ತಿಳಿಸಿದರು.


ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಕುವೆಂಪು ಜನ್ಮದಿನದ ನಿಮಿತ್ತ ಜರುಗಿದ ವಿಶ್ವಮಾನವ ದಿನಾಚರಣೆಯಲ್ಲಿ ಉಪನ್ಯಾಸ ನೀಡಿ ಮಾತನಾಡಿದರು.

ಪ್ರೊ. ಚಂದ್ರಶೇಖರ ವಸ್ತ್ರದ ಮಾತನಾಡಿ, ಕುವೆಂಪು ಅವರ ಚಿಂತನೆಗಳು ವಿಶ್ವಮಾನವತ್ವ, ಸಮಾನತೆ ಮತ್ತು ಸಾಮಾಜಿಕ ಕ್ರಾಂತಿಯ ಮೇಲೆ ಕೇಂದ್ರೀಕೃತವಾಗಿವೆ. ಕರ್ನಾಟಕದ ಸಮಗ್ರತೆ, ಸರ್ವೋದಯದ ಕನಸನ್ನು ಕಂಡರು. ವೈಚಾರಿಕ ಕ್ರಾಂತಿಯ ಮೂಲಕ ಸಮಾಜವನ್ನು ಎಚ್ಚರಗೊಳಿಸುವದು ತಮ್ಮ ಧರ್ಮವೆಂದು ನಂಬಿದ್ದರು. ನಕಾರಾತ್ಮಕವಾಗಿ ಬಿಂಬಿತವಾದ ಪಾತ್ರಗಳಲ್ಲಿಯ ಒಳ್ಳೆತನವನ್ನು ಎತ್ತಿ ತೋರಿ ಓದುಗನಲ್ಲಿ ಚಿಂತನೆಗಳನ್ನು ಬದಲಿಸಿದರು ಎಂದು ತಿಳಿಸಿದರು.

ನೀಲಮ್ಮ ಅಂಗಡಿ ಕುವೆಂಪು ವಿರಚಿತ ಗೀತೆಯನ್ನು ಹಾಡಿದರು. ಕಿಶೋರಬಾಬು ನಾಗರಕಟ್ಟಿ ಸ್ವಾಗತಿಸಿದರು. ರಾಹುಲ ಗಿಡ್ನಂದಿ ನಿರೂಪಿಸಿದರು. ಸತೀಶ ಚನ್ನಪ್ಪಗೌಡ್ರ ವಂದಿಸಿದರು.

ಕಾರ್ಯಕ್ರಮದಲ್ಲಿ ಕೆ.ಎಚ್. ಬೇಲೂರು, ರತ್ನಕ್ಕ ಪಾಟೀಲ, ಜೆ.ಎ. ಪಾಟೀಲ, ಸಿ.ಕೆ.ಎಚ್. ಕಡಣಿ ಶಾಸ್ತ್ರೀ, ವಿ.ಎಂ. ವೇರ್ಣೇಕರ, ಚಂದ್ರಕಲಾ ಇಟಗಿಮಠ, ರಾಜಶೇಖರ ದಾನರಡ್ಡಿ, ಅಮರೇಶ ರಾಂಪೂರ, ಡಿ.ಎಸ್. ಬಾಪುರಿ, ಎಸ್.ಯು. ಸಜ್ಜನಶೆಟ್ಟರ, ಕೆ.ಎಸ್. ಬಾಳಿಕಾಯಿ, ಎ.ಎಸ್. ಮಕಾನದಾರ, ಬಸವರಾಜ ಗಣಪ್ಪನವರ, ಸಿ.ಎಂ. ಮಾರನಬಸರಿ, ರತ್ನಾ ಪುರಂತರ, ಶೈಲಜಾ ಗಿಡ್ನಂದಿ, ರಾಜಶೇಖರ ಕರಡಿ, ಚನವೀರಪ್ಪ ದುಂದೂರ, ಎಸ್.ವಿ. ಯಂಡಿಗೇರಿ, ಬಿ.ಬಿ. ಹೊಳಗುಂದಿ, ಶಿಲ್ಪಾ ಮ್ಯಾಗೇರಿ, ಸತೀಶ ಕುಲಕರ್ಣಿ, ಜಯದೇವ ಮೆಣಸಗಿ, ಎ.ಸಿ. ಹಿರೇಮಠ, ಬಸವರಾಜ ನೆಲಜೇರಿ, ಮಂಜುಳಾ ವೆಂಕಟೇಶಯ್ಯ, ಎ.ಎಂ. ಅಂಗಡಿ, ವಿ. ಹರಿನಾಥಬಾಬು, ಅಕ್ಕಮ್ಮ ಪಾರ್ವತಿಮಠ, ಉಮಾ ಪಾರ್ವತಿಮಠ, ಸುಧಾ ಬಳ್ಳಿ, ಎಂ.ಎಫ್. ಡೋಣಿ, ಪ್ರ.ತೋ. ನಾರಾಯಣಪೂರ ಮೊದಲಾದವರು ಉಪಸ್ಥಿತರಿದ್ದರು.

# ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಕರ್ನಾಟಕ ಸೆಂಟ್ರಲ್ ಕೋ ಆಪರೇಟಿವ್ ಬ್ಯಾಂಕ್ ವತಿಯಿಂದ ಗುರುವಾರ 2026ನೇ ಸಾಲಿನ ಕ್ಯಾಲೆಂಡರ್ ಬಿಡುಗಡೆ ಸಮಾರಂಭ ಜರುಗಿತು.

ಇದೇ ಸಂದರ್ಭದಲ್ಲಿ ಗದಗ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಉಪಾಧ್ಯಕ್ಷ ಪ್ರಭುಸ್ವಾಮಿ ಅರವಟಗಿಮಠ ಅವರನ್ನು ಸನ್ಮಾನಿಸಲಾಯಿತು. ಶಾಖಾ ವ್ಯವಸ್ಥಾಪಕಿ ಅಕ್ಕಮ್ಮ ಪಾಟೀಲ, ಕಿಡಿಯಪ್ಪ ಕಿಟಗೇರಿ, ಆನಂದ ನಾಯಕ, ಮರ್ತುಜಾ ಮೂಲಿಮನಿ, ಕರಿಯಪ್ಪ ಚಲವಾದಿ, ಸುನೀಲ ಮಳಗಿ, ಬಸನಗೌಡ ಪೊಲೀಸ್‌ಪಾಟೀಲ, ಅಶೋಕ ಬೇವಿನಕಟ್ಟಿ, ಹುಲಗಪ್ಪ ಬಂಡಿವಡ್ಡರ, ಈರಪ್ಪ ಮಣ್ಣೊಡ್ಡರ, ಕಳಕಪ್ಪ ಮುಗಳಿ, ಬಾಳಪ್ಪ ಅಣಗೌಡ್ರ, ಪ್ರಶಾಂತ ಪುರಿ ಮುಂತಾದವರಿದ್ದರು.

# ಶ್ರೀ ಗವಿಸಿದ್ಧೇಶ್ವರ ಜಾತ್ರಾ ಮಹೋತ್ಸವ
## ಮಹಾ ದಾಸೋಹಕ್ಕೆ ಚಾಲನೆ



■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಶ್ರೀ ಗವಿಸಿದ್ಧೇಶ್ವರ ಜಾತ್ರಾ ಮಹೋತ್ಸದ ಮಹಾರಥೋತ್ಸವವು ಜ. 5ರಂದು ಜರುಗಲಿದ್ದು, ಜಾತ್ರಾ ಮಹೋತ್ಸವದ ಮಹಾದಾಸೋಹಕ್ಕೆ ಬುಧವಾರ ಸಂಜೆ ಬಿಜಕಲ್‌ನ ಮ.ನಿ.ಪ್ರ ಶಿವಬಸವ ಮಹಾಸ್ವಾಮಿಗಳವರು ಚಾಲನೆ ನೀಡಿದರು. ಕೊಪ್ಪಳ ಜಿಲ್ಲಾಧಿಕಾರಿ ಡಾ. ಸುರೇಶ ಇಟ್ನಾಳ್, ಕೊಪ್ಪಳ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಾಮ ಎಲ್.ಅರಸಿದ್ಧಿ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು, ಭಕ್ತರು ಈ ಸಂಧರ್ಭದಲ್ಲಿ ಉಪಸ್ಥಿತರಿದ್ದರು. 6 ಎಕರೆ ಪ್ರದೇಶದಲ್ಲಿ ನಿರ್ಮಾಣಗೊಂಡಿರುವ ಮಹಾ ದಾಸೋಹದಲ್ಲಿ ಸಾವಿರಾರು ಭಕ್ತರು ಏಕಕಾಲಕ್ಕೆ ಪ್ರಸಾದ ಸ್ವೀಕರಿಸುವದು ವಿಶೇಷತೆಯಾಗಿದೆ.

ಶ್ರೀ ಗವಿಮಠದ ಜಾತ್ರಾ ಮಹೋತ್ಸವದ ಮಹಾದಾಸೋಹದಲ್ಲಿ ಶ್ರೀಗವಿಸಿದ್ಧೇಶ್ವರ ಆಯುರ್ವೇದ ಮಹಾವಿದ್ಯಾಲಯದ ಹರ್ಬಲ್ ಗಾರ್ಡನ್‌ನಲ್ಲಿ ಭವ್ಯವಾದ ಅಡುಗೆಮನೆ, ಆಹಾರ ಸಂಗ್ರಹಣೆ ಕೊಠಡಿ, ತರಕಾರಿ ಸಂಗ್ರಹಣೆ ಕೊಠಡಿ, ತರಕಾರಿ ಹೆಚ್ಚುವ ಸ್ಥಳ, ಹಾಗೂ ಪ್ರಸಾದ ಸ್ವೀಕರಿಸಲು ಹೆಚ್ಚು ವಿಶಾಲವಾದ ಸ್ಥಳಾವಕಾಶ ಕಲ್ಪಿಸಿದೆ. ಭಕ್ತರು ಪ್ರಸಾದ ಸೇವನೆಗೆ ಸಾಲಾಗಿ ಬರಲು ಅಚ್ಚುಕಟ್ಟಾದ ಸಾಲುಗಳನ್ನು ನಿರ್ಮಿಸಲಾಗಿದೆ. ಈ ವರ್ಷ ಸುಮಾರು 76 ಕೌಂಟರ್‌ಗಳನ್ನು ನಿರ್ಮಿಸಲಾಗಿದ್ದು, ಈಗಾಗಲೇ ಮಹಾ ದಾಸೋಹದಲ್ಲಿ ರೊಟ್ಟಿ ಸಂಗ್ರಹಣಾ ಕೊಠಡಿಗಳಿವೆ.

ಮಹಿಳೆಯರಿಗೆ ಹಾಗೂ ಪುರುಷರಿಗೆ ಪ್ರತ್ಯೇಕವಾಗಿ ಕೌಂಟರ್ ವ್ಯವಸ್ಥೆ ಕಲ್ಪಿಸಲಾಗಿದೆ. ಅಲ್ಲದೇ 04 ಪ್ರವೇಶ ದ್ವಾರಗಳು, 65 ಅಡಿಯ ಅನ್ನ ಸಂಗ್ರಹಣಾ ಕಟ್ಟೆ, ಇವುಗಳ ಜೊತೆಗೆ ಪ್ರತಿದಿನ ಪ್ರಸಾದದ ಉಸ್ತುವಾರಿ ಹಾಗೂ ಪರಿಶೀಲನೆಗಾಗಿ ಆಹಾರ ಇಲಾಖೆಯ ಅಧಿಕಾರಿಗಳು, ಪೊಲೀಸರು ಇರುತ್ತಾರೆ. ಮಹಾ ದಾಸೋಹದಲ್ಲಿ ಭಕ್ತರ ಸುರಕ್ಷತೆಗಾಗಿ ಹೊರ, ಒಳಾಂಗಣ ಸಿಸಿ ಕ್ಯಾಮರಾಗಳನ್ನು ಅಳವಡಿಸಲಾಗಿದೆ. ಜಾತ್ರಾಮಹೋತ್ಸವ ಪ್ರಾರಂಭದಿಂದ ಮುಕ್ತಾಯದವರೆಗೆ ಪ್ರಸಾದ ನಿಲಯದಲ್ಲಿ ಸುಮಾರು 25 ಸಾವಿರ ಭಕ್ತರು ವಿವಿಧ ಸೇವೆಯಲ್ಲಿ ಪಾಲ್ಗೊಳ್ಳುವರು. ಜಾತ್ರೆಯ ಪ್ರಾರಂಭದಿಂದ ಮುಕ್ತಾಯದವರೆಗೆ ಸುಮಾರು 15ರಿಂದ 18 ಲಕ್ಷ ಭಕ್ತರು ಪ್ರಸಾದ ಸ್ವೀಕರಿಸುವ ನಿರೀಕ್ಷೆ ಇದೆ.

### 'ಆಚಾರವೇ ಸ್ವರ್ಗ' ಮುಖ್ಯ ಗೋಷ್ಠಿಯಲ್ಲಿ ವಿಶೇಷ ಉಪನ್ಯಾಸ ನೀಡಿದ ಜಿ.ಆರ್. ರವದಿ

# ಆಚಾರವೇ ಸ್ವರ್ಗ, ಅನಾಚಾರವೇ ನರಕ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ



12ನೇ ಶತಮಾನದಲ್ಲಿ ಬಸವಣ್ಣನವರು ಹೇಳಿದ ಮಾತುಗಳು ಇಂದಿಗೂ ಪ್ರಸ್ತುತವಾಗಿವೆ. ಸದಾಚಾರದಲ್ಲಿರುವವನಿಗೆ ಈ ಸಮಾಜದಲ್ಲಿ ಎಲ್ಲ ರೀತಿಯ ಮಾನ–ಸನ್ಮಾನಗಳು ದೊರಕುತ್ತವೆ. ಅನಾಚಾರಿಯಾದವನಿಗೆ ಎಂದಿಗೂ ಗೌರವವಿರುವದಿಲ್ಲ. ಆದ್ದರಿಂದ ನೀವು ಸದಾಚಾರಿಯಾಗಲು ಪ್ರಯತ್ನಿಸಿ ಎಂದು ಉಪನ್ಯಾಸಕ ಜಿ.ಆರ್. ರವದಿ ಹೇಳಿದರು.

ಪಟ್ಟಣದಲ್ಲಿ ನಡೆದಿರುವ ಅಕ್ಷರ ಜಾತ್ರೆ ಕಾರ್ಯಕ್ರಮದಲ್ಲಿ 'ಆಚಾರವೇ ಸ್ವರ್ಗ' ಮುಖ್ಯ ಗೋಷ್ಠಿಯ ನೈತಿಕ ಮೌಲ್ಯಗಳು ಮತ್ತು ಮೊಬೈಲ್ ಬಳಕೆ ಕಾರ್ಯಕ್ರಮದಲ್ಲಿ ಅವರು ವಿಶೇಷ ಉಪನ್ಯಾಸ ನೀಡಿದರು.

ನೈತಿಕ ಮೌಲ್ಯಗಳು ವ್ಯಕ್ತಿಯನ್ನು ಈ ಸಮಾಜದಲ್ಲಿ ತಲೆ ಎತ್ತಿ ನಡೆಯುವಂತೆ ಮಾಡುತ್ತವೆ. ಅದಕ್ಕಾಗಿ ನಿಮ್ಮಲ್ಲಿ ನೈತಿಕ ಮೌಲ್ಯಗಳನ್ನು ಬೆಳೆಸಿಕೊಳ್ಳುವುದರ ಜೊತೆಗೆ ಮಾನವೀಯ ಮೌಲ್ಯಗಳನ್ನೂ ಬೆಳೆಸಿಕೊಳ್ಳಬೇಕು. ನೈತಿಕ ಮೌಲ್ಯಗಳು ವ್ಯಕ್ತಿಯ ಘನತೆ ಗೌರವಗಳನ್ನು ಹೆಚ್ಚಿಸಿದರೆ, ಮಾನವೀಯ ಮೌಲ್ಯಗಳು ವ್ಯಕ್ತಿಯ ವ್ಯಕ್ತಿತ್ವವನ್ನು ಬಾನೆತ್ತರಕ್ಕೆ ಏರಿಸುತ್ತದೆ ಎಂದರು.

ಮೊಬೈಲ್ ಬಳಕೆ ಎಂದಿಗೂ ಅತಿಯಾಗಬಾರದು. ಅತಿಯಾದುದು ಯಾವುದೇ ಇದ್ದರೂ ಅದು ವಿಷಕ್ಕೆ ಸಮಾನ. ಆದ್ದರಿಂದ ನಿಮ್ಮ ಕೈಯಲ್ಲಿ ಹೆಚ್ಚಾಗಿ ಮೊಬೈಲ್‌ನ್ನು ಹಿಡಿಯದೆ ಪುಸ್ತಕವನ್ನು ಹಿಡಿದು ನಿಮ್ಮ ಮಸ್ತಕವನ್ನು ಬೆಳೆಸಿಕೊಳ್ಳಿರಿ ಎಂದರು.

ಆರೋಗ್ಯಕ್ಕಾಗಿ ಆಹಾರ ಕುರಿತ ವಿಷಯದಲ್ಲಿ ಉಪನ್ಯಾಸ ನೀಡಿದ ಡಾ. ದೀಪಾ ಪಾಟೀಲ, ನಿತ್ಯದ ಊಟದಲ್ಲಿ ನಾವು ಸಮತೋಲನ ಆಹಾರವನ್ನು ತೆಗೆದುಕೊಳ್ಳುವುದನ್ನು ರೂಢಿಸಿಕೊಳ್ಳಬೇಕು. ಅದರಲ್ಲಿ ಶರ್ಕರ, ಪಿಷ್ಟ ಮತ್ತು ಖನಿಜಾಂಶಗಳು ಇರುವಂತೆ ನೋಡಿಕೊಳ್ಳಬೇಕು. ದೇಹದ ಪೋಷಣೆಗೆ ಆಹಾರ ಅತಿ ಮುಖ್ಯವಾಗಿದೆ. ಆದರೆ ಅದನ್ನು ಹೇಗೆ ಸ್ವೀಕರಿಸಬೇಕೆಂಬುದನ್ನು ನಾವು ತಿಳಿದಿದ್ದರೆ ನಮಗೆ ಯಾವ ರೋಗಗಳೂ ಕಾಡುವುದಿಲ್ಲ. ನಾವು ಸಾತ್ವಿಕ ಆಹಾರವನ್ನು ಸ್ವೀಕರಿಸಿದರೆ ಸಾತ್ವಿಕ ಗುಣಗಳು ಬರುತ್ತವೆ, ತಾಮಸ ಆಹಾರ ಸ್ವೀಕರಿಸಿದರೆ ತಾಮಸ ಗುಣಗಳು ಬರುತ್ತವೆ. ಆದ್ದರಿಂದ ಸಾಧ್ಯವಾದಷ್ಟು ಸಾತ್ವಿಕ ಆಹಾರ ಸೇವಿಸಬೇಕೆಂದರು.


ದಕ್ಷಿಣ ಭಾರತದ ಊಟವು ಸಮತೋಲನದಿಂದ ಕೂಡಿರುವುದು ನಮ್ಮ ಸೌಭಾಗ್ಯವಾಗಿದೆ. ನಮ್ಮ ಮನೆಯಲ್ಲಿ ನೀಡುವ ಆಹಾರವೇ ನಮ್ಮ ಇಂದಿನ ಆರೋಗ್ಯಕ್ಕೆ ಮೂಲ ಕಾರಣ. ಸೊಪ್ಪು–ತರಕಾರಿಗಳನ್ನು ನಿತ್ಯವೂ ಸೇವಿಸುವುದು ಅವಶ್ಯಕ. ಎಣ್ಣೆಯ ಬಳಕೆಯನ್ನು, ಕರಿದ ಪದಾರ್ಥಗಳ ಬಳಕೆಯನ್ನು ಸಾಧ್ಯವಾದಷ್ಟು ಕಡಿಮೆ ಮಾಡಬೇಕೆಂದು ಡಾ. ದೀಪಾ ತಿಳಿಸಿದರು. ಸಾನ್ನಿಧ್ಯ ವಹಿಸಿದ್ದ ಮುಪ್ಪಿನ ಬಸವಲಿಂಗ ಸ್ವಾಮೀಜಿ ಆಶೀರ್ವಚನ ನೀಡಿ, ದೇಹವು ನಾವು ಹೇಳಿದಂತೆ ಕೇಳುತ್ತದೆ. ಅದಕ್ಕೆ ಸೂಕ್ತ ತರಬೇತಿಯನ್ನು ನೀಡಬೇಕು. ಈ ತರಬೇತಿ ನೀಡುವ ಕ್ರಮವನ್ನು ನೀವು ತಿಳಿದಿರಬೇಕೆಂದು ಹೇಳಿದರು. ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ ವೇದಿಕೆಯಲ್ಲಿದ್ದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಡಾ. ಜಿ.ಕೆ. ಕಾಳೆ ಮಾತನಾಡಿ, ನೀವು ಆಹಾರವನ್ನು ಸ್ವೀಕರಿಸುವುದರಲ್ಲಿ ಯಾವುದೇ ಹಿಂಜರಿಕೆ ಮಾಡಿಕೊಳ್ಳಬೇಡಿ. ಆದರೆ ತಿಂದ ಆಹಾರವನ್ನು ಜೀರ್ಣಿಸುವ ಚಟುವಟಿಕೆಗಳೆಡೆಗೆ ಗಮನ ಹರಿಸಿದರೆ ಆರೋಗ್ಯದಿಂದ ಇರಲು ಸಾಧ್ಯ ಎಂದರು.

# ಶ್ರೀ ಗವಿಮಠ ಜಾತ್ರೆಗೆ ಚಾಲನೆ

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ನಗರದ ಶ್ರೀ ಗವಿಸಿದ್ಧೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಗುರುವಾರ ಮಧ್ಯಾಹ್ನ 2 ಗಂಟೆಗೆ ಬಸವಪಟ ಆರೋಹಣದ ಮೂಲಕ ಜಾತ್ರೆಯ ಸಕಲ ಕಾರ್ಯಕ್ರಮಗಳಿಗೆ ಚಾಲನೆ ದೊರೆಯಿತು. ಶ್ರೀ ಗವಿಮಠದ ಕರ್ತೃಗದ್ದುಗೆಯ ಮುಂಭಾಗದಲ್ಲಿ 'ಬಸವ ಪಟ ಆರೋಹಣ' ಎಂಬ ಧಾರ್ಮಿಕ ಕಾರ್ಯಕ್ರಮ ಜರುಗಿತು. ಭಕ್ತರೆಲ್ಲರೂ ಕೂಡಿಕೊಂಡು ನಂದಿ, ಈಶ್ವರ, ಸೂರ್ಯ, ಚಂದ್ರ, ವರುಣ, ಪ್ರಣವ ಮಂತ್ರವಿರುವ ಬಸವಪಟಕ್ಕೆ ಭಕ್ತರು ಪೂಜೆ ಸಲ್ಲಿಸಿ, ನೈವೇದ್ಯ ಮಾಡಿ, ಬಳಿಕ ಅದನ್ನು ಶ್ರದ್ಧೆಯಿಂದ ಕೈಯಲ್ಲಿ ಹಿಡಿದು ಶ್ರೀ ಗವಿಮಠದ ಕರ್ತೃ ಗದ್ದುಗೆಯ ಸುತ್ತ ಐದು ಸಾರಿ ಪ್ರದಕ್ಷಿಣೆ ಹಾಕುತ್ತಾ ಗವಿಸಿದ್ಧೇಶ್ವರನ ಜಯಘೋಷಗಳೊಂದಿಗೆ ಕ'ತ್ರ್ಯ'ಗ'ದ'್ದ'ಗೆ'ಂ'ು'ು ಮುಂಭಾಗದ ಎದುರಿಗಿರುವ ಶಿಲಾಸ್ತಂಭಕ್ಕೆ ಬಸವಪಟವನ್ನು ಆರೋಹಣಗೊಳಿಸಿದರು.



ನಮ್ಮದು ಕೃಷಿ ಪ್ರಧಾನ ನಾಡು. ಹೀಗಾಗಿ, ನಂದಿ, ಈಶ್ವರ, ಸೂರ್ಯ, ಚಂದ್ರ, ವರುಣ, ಪ್ರಕೃತಿ ಇವುಗಳಿಗೆ ಪೂಜೆ ಸಲ್ಲಿಸುವದು ನಮ್ಮ ಪ್ರಥಮ ಕರ್ತವ್ಯವಾಗಿದೆ. ಶ್ರೀ ಗವಿಸಿದ್ಧನ ಸನ್ನಿಧಿಯ ಈ ನಾಡಿನಲ್ಲಿ ಸದಾಕಾಲ ಉತ್ತಮ ಮಳೆ, ಉತ್ತಮ ಬೆಳೆ ಬಂದು ರೈತಾಪಿ ವರ್ಗಕ್ಕೆ ಸುಖ, ಶಾಂತಿ, ಸಮೃದ್ಧಿ ಸದಾ ದೊರೆಯಲೆಂಬ ಆಶಯಕ್ಕಾಗಿ 'ಬಸವಪಟ ಆರೋಹಣ' ಕಾರ್ಯಕ್ರಮವು ಜರುಗುತ್ತದೆ. ಶ್ರೀಮಠದ ಜಾತ್ರಾ ಪರಂಪರೆಯಲ್ಲಿ ಬಸವ ಪಟ ಆರೋಹಣ ಕಾರ್ಯಕ್ರಮದ ಮೂಲಕವೇ ಜಾತ್ರೆಗೆ ಚಾಲನೆ ಸಿಕ್ಕಂತಾಗುತ್ತದೆ.

## ಹೆಸ್ಕಾಂ ವೀರಶೈವ ಲಿಂಗಾಯತ ನೌಕರರ ಸಂಘದಿಂದ ಕ್ಯಾಲೆಂಡರ್ ಬಿಡುಗಡೆ

# ಸಮಾಜ ಬಾಂಧವರು ಮಹಾಸಭಾಕ್ಕೆ ಶಕ್ತಿ ತುಂಬಿ

■ ವಿಜಯಸಾಕ್ಷಿ ಸುದ್ದಿ, ಗದಗ

ವೀರಶೈವ ಮತ್ತು ಲಿಂಗಾಯತ ಎರಡೂ ಒಂದೇ ಆಗಿದ್ದು, ಸಮಾಜ ಬಾಂಧವರು, ರಾಜಕಾರಣಿಗಳು, ಮಠಾಧೀಶರು ಈ ಸಮಾಜ ಬಾಂಧವರಲ್ಲಿ ಇನ್ನಷ್ಟು ಒಗ್ಗಟ್ಟನ್ನು ಮೂಡಿಸಿ ಬಲಪಡಿಸುವ ಕಾರ್ಯ ಮಾಡಬೇಕೆಂದು ನಿವೃತ್ತ ಡಿಜಿ-ಐಜಿಪಿ ಹಾಗೂ ಅಖಿಲ ಭಾರತ ವೀರಶೈವ ಮಹಾಸಭಾದ ರಾಜ್ಯಾಧ್ಯಕ್ಷ ಡಾ. ಶಂಕರ ಬಿದರಿ ಮನವಿ ಮಾಡಿಕೊಂಡರು.

ಅವರು ಗದುಗಿನ ಪಂ. ಭೀಮಸೇನ ಜೋಶಿ ರಂಗಮಂದಿರದಲ್ಲಿ ಗದಗ ಜಿಲ್ಲಾ ಕೆಪಿಟಿಸಿಎಲ್- ಹೆಸ್ಕಾಂ ವೀರಶೈವ ಲಿಂಗಾಯತ ನೌಕರರ ಸಂಘ ಏರ್ಪಡಿಸಿದ್ದ 2026ನೇ ಸಾಲಿನ ಕ್ಯಾಲೆಂಡರ್ ಬಿಡುಗಡೆ ಸಮಾರಂಭದಲ್ಲಿ ಕ್ಯಾಲೆಂಡರ್ ಬಿಡುಗಡೆಗೊಳಿಸಿ ಮಾತನಾಡಿದರು.




ಮಹಾಸಭಾ ಯಾರನ್ನೂ ಟೀಕಿಸುವದಿಲ್ಲ, ಯಾರ ವಿರುದ್ಧವೂ ಅಲ್ಲ. ವೀರಶೈವ ಲಿಂಗಾಯತರ ಅವರವರ ವೃತ್ತಿ, ಆಚರಣೆ ಏನೇ ಇದ್ದರೂ ಅದು ಅವರ ವೈಯುಕ್ತಿಕ. ಆದರೆ ಧರ್ಮ-ಸಮಾಜ ಎಂದು ಬಂದಾಗ ನಾವೆಲ್ಲರೂ ಒಂದು ಎಂಬ ಸದ್ಭಾವನೆ ಬರಬೇಕು. ಶತಶತಮಾನಗಳಿಂದ ಒಂದಾಗಿ ಬಂದಿರುವ ವೀರಶೈವ ಲಿಂಗಾಯತರನ್ನು ಒಗ್ಗೂಡಿಸಿಕೊಂಡು ಮುನ್ನಡೆಸುವ ಜವಾಬ್ದಾರಿಯುತ ಕಾರ್ಯಕ್ಕೆ ಮಹಾಸಭಾ ಮುಂದಾಗಿದ್ದು, ಮಹಾಸಭಾಕ್ಕೆ ಆಜೀವ ಸದಸ್ಯರಾಗುವ ಮೂಲಕ ಮಹಾಸಭಾಕ್ಕೆ ಮಹಾಬಲ ನೀಡಬೇಕೆಂದು ಶಂಕರ ಬಿದರಿ ಸಮಾಜಬಾಂಧವರಲ್ಲಿ ಅರಿಕೆ ಮಾಡಿಕೊಂಡರು.

ಒಗ್ಗಟ್ಟು ಮತ್ತು ಸಂಘಟನೆ ಇಲ್ಲದ ಸಮಾಜ ಬಾಂಧವರನ್ನು ಮಹಾಸಭಾ ಈಗಾಗಲೇ ವೀರಶೈವ ಮತ್ತು ಲಿಂಗಾಯತ ಸಮಾಜಬಾಂಧವರಲ್ಲಿ ಒಗ್ಗಟ್ಟು ಮೂಡಿಸಿ ಅವರನ್ನು ಮಹಾಸಭಾದ ಮೂಲಕ ಸಂಘಟನೆಗೆ ಒಳಪಡಿಸಿ ಸಮಾಜವನ್ನು ಬಲಪಡಿಸುವ ಮಹಾನ್ ಕಾರ್ಯವನ್ನು ನಿರಂತರವಾಗಿ ಮಾಡಿಕೊಂಡು ಬಂದಿದೆ. ಈ ವಿಷಯವಾಗಿ ಇತ್ತೀಚೆಗೆ ನಮ್ಮನ್ನಗಲಿದ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷ, ಹಿರಿಯ ರಾಜಕೀಯ ಮುತ್ಸದ್ಧಿ ಶಾಮನೂರ ಶಿವಶಂಕರಪ್ಪ ಅವರು ಮಾಡಿದ ಪ್ರಯತ್ನ, ಪರಿಶ್ರಮವನ್ನು ಸಮಾಜ ಎಂದೆಂದಿಗೂ ಮರೆಯುವದಿಲ್ಲ ಎಂದರು.


ಗುರು-ವಿರಕ್ತರು ಸಮಾಜವನ್ನು ಸನ್ಮಾರ್ಗದೆಡೆಗೆ ಮುನ್ನಡೆಸುವ ಕಾರ್ಯ ಮಾಡಬೇಕು. ವೀರಶೈವ ಮತ್ತು ಲಿಂಗಾಯತ ಎರಡೂ ಒಂದೇ ಎಂಬ ಭಾವನೆಯನ್ನು ಸಮಾಜ ಬಾಂಧವರಲ್ಲಿ ಗಟ್ಟಿಯಾಗಿ ಮೂಡಿಸಬೇಕಿದೆ.

ಈ ಪ್ರಯತ್ನವನ್ನು ಮಹಾಸಭಾ ನಿರಂತರವಾಗಿ ಮಾಡಿಕೊಂಡು ಬಂದಿದ್ದು, ಇದಕ್ಕೆ ನಾಡಿನ ಎಲ್ಲ ಮಠಾಧೀಶರೂ ಕೃಪೆ ಮಾಡಿ ಸಾಥ್ ನೀಡಬೇಕೆಂದು ಮನವಿ ಮಾಡಿಕೊಂಡರು.

ಮುಖ್ಯ ಅತಿಥಿ ಅ.ಭಾ.ವೀ ಮಹಾಸಭಾದ ಗದಗ ಜಿಲ್ಲಾಧ್ಯಕ್ಷ ಶರಣಬಸಪ್ಪ ಗುಡಿಮನಿ ಸಮಾಜ ಮತ್ತು ಸಂಘಟನೆ ಕುರಿತು ಮಾತನಾಡಿದರು. ಪ್ರೊ. ಅನಿಲ ವೈದ್ಯ ಅವರಿಂದ ವಿಶೇಷ ಉಪನ್ಯಾಸ ಜರುಗಿತು.

ಸಾನ್ನಿಧ್ಯವನ್ನು ಹೂವಿನಶಿಗ್ಲಿ ವಿರಕ್ತಮಠದ ಪೂಜ್ಯ ಚನ್ನವೀರ ಮಹಾಸ್ವಾಮಿಗಳು ವಹಿಸಿದ್ದರು. ಅಧ್ಯಕ್ಷತೆಯನ್ನು ಸಂಘದ ಅಧ್ಯಕ್ಷ ರಾಜೇಶ ಕಲ್ಯಾಣಶೆಟ್ಟರ ವಹಿಸಿದ್ದರು. ಗಣ್ಯರಾದ ಗಂಗಾಧರ ಗಡ್ಡಿ, ಚನ್ನವೀರಪ್ಪ ಹುಣಶೀಕಟ್ಟಿ, ಮುರುಘರಾಜೇಂದ್ರ ಬಡ್ನಿ, ಉದಯರವಿ ಗುಡಿಮನಿ ಸೇರಿದಂತೆ ಗಣ್ಯರು, ಸಂಘಟನೆಯ ಪದಾಧಿಕಾರಿಗಳು ವೇದಿಕೆಯ ಮೇಲೆ ಉಪಸ್ಥಿತರಿದ್ದರು.

# ಪ್ರತಿಭಾ ಕಾರಂಜಿಯಿಂದ ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನ




■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಶಿಕ್ಷಣದ ಜೊತೆಗೆ ಕಲೆ, ಸಾಹಿತ್ಯ, ಕ್ರೀಡೆಗಳಂತಹ ಪಠ್ಯೇತರ ಚಟುವಟಿಕೆಗಳು ವಿದ್ಯಾರ್ಥಿಗಳ ಸಮಗ್ರ ವ್ಯಕ್ತಿತ್ವ ವಿಕಸನಕ್ಕೆ ಅತ್ಯಂತ ಅಗತ್ಯವೆಂದು ಜಿಲ್ಲಾ ಪಂಚಾಯಿತಿ ಸಾಮಾಜಿಕ ನ್ಯಾಯ ಸಮಿತಿ, ವಿರೋಧ ಪಕ್ಷದ ಮಾಜಿ ನಾಯಕ, ಎಪಿಎಂಸಿ ಮಾಜಿ ಸದಸ್ಯ ಹೇಮಗಿರೀಶ ಗು.ಹಾವಿನಾಳ ಹೇಳಿದರು.

ತಾಲೂಕಿನ ಕಕ್ಕೂರು ಗ್ರಾಮದ ಪ್ರಾಥಮಿಕ ಮತ್ತು ಪ್ರೌಢಶಾಲಾ ಮಟ್ಟದ ಕಕ್ಕೂರು ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪ್ರತಿಭಾ ಕಾರಂಜಿ ಮತ್ತು ಕಲೋತ್ಸವದಂತಹ ವೇದಿಕೆಗಳು ಮಕ್ಕಳ ಆತ್ಮವಿಶ್ವಾಸ, ಸೃಜನಶೀಲತೆ ಮತ್ತು ನಾಯಕತ್ವ ಗುಣಗಳನ್ನು ಬೆಳೆಸುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ ಎಂದು ಹೇಳಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಜಿ.ಎಸ್. ಅಣ್ಣಿಗೇರಿ, ಡಯಟ್ ಉಪನ್ಯಾಸಕ ಯಲ್ಲಪ್ಪ ಹಂದ್ರಾಳ ಮಾತನಾಡಿದರು.

ವಿದ್ಯಾರ್ಥಿಗಳ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು, ಭಾಷಣ, ನೃತ್ಯ, ಗಾಯನ ಸೇರಿದಂತೆ ಹಲವಾರು ಸ್ಪರ್ಧೆಗಳು ಗಮನ ಸೆಳೆದವು. ಕಾರ್ಯಕ್ರಮದಲ್ಲಿ ಗ್ರಾ.ಪಂ ಅಧ್ಯಕ್ಷರು, ಸದಸ್ಯರು, ಎಸ್‌ಡಿಎಂಸಿ ಪದಾಧಿಕಾರಿಗಳು, ಶಾಲಾ ಗುರುಗಳು, ಗುರುಮಾತೆಯರು, ವಿದ್ಯಾರ್ಥಿಗಳು ಹಾಗೂ ಗ್ರಾಮದ ಗುರು-ಹಿರಿಯರು ಇದ್ದರು.

# ಜಕಣಾಚಾರ್ಯರಂತಹ ದೇವಮಾನವರ ಸ್ಮರಣೆ ಅಗತ್ಯ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದೇಶದ ಸಂಸ್ಕೃತಿ, ಕಲೆ, ವಾಸ್ತುಶಿಲ್ಪ, ಪರಂಪರೆಯ ಶ್ರೀಮಂತಿಕೆ ಹೆಚ್ಚಿಸುವಲ್ಲಿ ಅಮರಶಿಲ್ಪಿ ಜಕಣಾಚಾರ್ಯರ ಕೊಡುಗೆ ಅಜರಾಮರ ಎಂದು ತಹಸೀಲ್ದಾರ ಧನಂಜಯ ಎಂ ಹೇಳಿದರು. ಅವರು ಗುರುವಾರ ಪಟ್ಟಣದ ತಹಸೀಲ್ದಾರ ಕಚೇರಿಯಲ್ಲಿ ಜಕಣಾಚಾರ್ಯ ಸಂಸ್ಮರಣಾ ದಿನದ ಅಂಗವಾಗಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು.

ವಿಶ್ವಕರ್ಮರ ಪಂಚ ಕಸುಬುಗಳು ಯಾವುದೇ ಧರ್ಮ, ಜಾತಿ, ಕುಲಕ್ಕೆ ಸೀಮಿತವಾಗಿರದೇ ನಾಗರಿಕರ ಬದುಕಿಗೆ ಆಧಾರಸ್ತಂಭವಾಗಿವೆ. ನಮ್ಮ ಸಂಸ್ಕೃತಿ, ಪರಂಪರೆ, ಇತಿಹಾಸ, ಕಲೆಯನ್ನು ತಮ್ಮ ಕೌಶಲ್ಯದ ಮೂಲಕ ಜೀವಂತವಾಗಿರಿಸಿದ್ದರಿಂದಲೇ ಅವರು ಅಮರ ಶಿಲ್ಪಿಯಾಗಿದ್ದಾರೆ. ಬೇಲೂರು-ಹಳೇಬೀಡುಗಳಂತಹ ವಿಶ್ವ ಶ್ರೇಷ್ಠ ಅನೇಕ ಶಿಲ್ಪಕಲಾ ದೇವಸ್ಥಾನಗಳ ನಿರ್ಮಾಣ ಕಾರ್ಯಕ್ಕೆ ತಮ್ಮನ್ನೇ ಸಮರ್ಪಿಸಿಕೊಂಡ ದೇವಮಾನವರ ಸ್ಮರಣೆ ಮುಖ್ಯವಾಗಿದೆ ಎಂದರು.



ವಿಶ್ವಕರ್ಮ ಸಮಾಜದ ತಾಲೂಕಾಧ್ಯಕ್ಷ ಈರಣ್ಣ ಬಡಿಗೇರ ಮಾತನಾಡಿ, ದೇಶದ ಸಾಂಸ್ಕೃತಿಕ, ಧಾರ್ಮಿಕ ಲೋಕದ ಶ್ರೀಮಂತಿಕೆಗೆ ಕಾರಣರಾದ ಜಕಣಾಚಾರ್ಯರ ಕುರಿತ ಅಧ್ಯಯನ, ಸಂಶೋಧನೆಗೆ ಸರ್ಕಾರ ಮುಂದಾಗಬೇಕು. ವಿಶ್ವಕರ್ಮ ಸಮಾಜದ ಯುವಕರು ಕಲಾ ಕ್ಷೇತ್ರದಲ್ಲಿ ಸಾಧನೆ ಮಾಡಲು ಸಹಾಯ-ಸಹಕಾರ, ಅವಕಾಶ ಕಲ್ಪಿಸಬೇಕು. ಜಕಣಾಚಾರ್ಯರ ಸಂಸ್ಮರಣಾ ದಿನವನ್ನು ಸರ್ಕಾರವೇ ಆಚರಿಸುತ್ತಿರುವುದು ಸಂತಸದ ವಿಚಾರ. ಈ ನಿಟ್ಟಿನಲ್ಲಿ ಸಮಾಜ ಬಾಂಧವರು ಏಕತೆಯಿಂದ ಕಾರ್ಯಕ್ರಮಗಳಲ್ಲಿ ಸಂಘಟಿತರಾಗಿ ಪಾಲ್ಗೊಳ್ಳಬೇಕು. ಎಲ್ಲರೂ ಒಗ್ಗಟ್ಟಿನಲ್ಲಿ ಬಲವಿದೆ ಎನ್ನುವ ನಿಟ್ಟಿನಲ್ಲಿ ಸಂಘಟಿತರಾಗಿ ಸಮಾಜವನ್ನು ಕಟ್ಟುವ ಕಾರ್ಯ ಮಾಡೋಣ ಎಂದರು. ಸಮಾಜದ ಮುಖಂಡರಾದ ರಾಮಚಂದ್ರ ಬಡಿಗೇರ, ಅಶೋಕ ಸೊರಟೂರ, ಮಾಂತೇಶ ಬಡಿಗೇರ, ರಾಘವೇಂದ್ರ ಬಡಿಗೇರ, ರಮೇಶ ಬಡಿಗೇರ, ಶಿವಣ್ಣ ಬಡಿಗೇರ, ಮೋಹನ ಸುತಾರ, ಮನೋಹರ ಪತ್ತಾರ, ರವಿ ಬಡಿಗೇರ, ಗಂಗಾಧರ ಬಡಿಗೇರ, ಹೂವಪ್ಪ ಸೊರಟೂರ, ಮಹೇಶ ಬಡಿಗೇರ, ಶ್ರೀಕಾಂತ ಪತ್ತಾರ ಸೇರಿದಂತೆ ತಹಸೀಲ್ದಾರ ಕಚೇರಿ ಸಿಬ್ಬಂದಿ ವರ್ಗ ಹಾಗೂ ವಿಶ್ವಕರ್ಮ ಸಮಾಜ ಬಾಂಧವರು, ಸಾರ್ವಜನಿಕರು ಹಾಜರಿದ್ದರು.

# ಕಲಾ ಪ್ರತಿಭೆಗಳ ಹಬ್ಬ ಪ್ರತಿಭಾ ಕಾರಂಜಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪ್ರತಿಭಾ ಕಾರಂಜಿ ಎಂಬುದು ಕಲಾ ಪ್ರತಿಭೆಗಳ ಚಿಣ್ಣರ ಹಬ್ಬ. ಮಕ್ಕಳಲ್ಲಿರುವ ಸುಪ್ತ ಪ್ರತಿಭೆಯನ್ನು ಅನಾವರಣಗೊಳಿಸುವುದೇ ಪ್ರತಿಭಾ ಕಾರಂಜಿ ಕಾರ್ಯಕ್ರಮದ ಉದ್ದೇಶವಾಗಿದೆ ಎಂದು ಬಿಇಓ ಎಚ್. ನಾಣಕೀ ನಾಯ್ಕ ಹೇಳಿದರು.

ಅವರು ಬುಧವಾರ ಪಟ್ಟಣದ ಸರ್ಕಾರಿ ಹಿರಿಯ ಉರ್ದು ಪ್ರಾಥಮಿಕ ಶಾಲೆ ನಂ. 1ರಲ್ಲಿ ಹಮ್ಮಿಕೊಂಡಿದ್ದ ಲಕ್ಷ್ಮೇಶ್ವರ ಉರ್ದು ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಸ್ಪರ್ಧಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಕವನ ವಾಚನ, ಗಾಯನ, ಚಿತ್ರಕಲೆ, ಪ್ರಬಂಧ, ಚರ್ಚಾ ಸ್ಪರ್ಧೆ, ಕ್ಲೇ ಮಾಡೆಲಿಂಗ್ ಇನ್ನೂ ಅನೇಕ ಕಲಾತ್ಮಕ, ಸಾಂಸ್ಕೃತಿಕ ಚಟುವಟಿಕೆಗಳು ಪ್ರತಿಭಾ ಕಾರಂಜಿ ವ್ಯಾಪ್ತಿಯಲ್ಲಿ ಬರುವುದರಿಂದ ಕಾರ್ಯಕ್ರಮದಲ್ಲಿ ಭಾಗವಹಿಸುವುದರೊಂದಿಗೆ ವಿದ್ಯಾರ್ಥಿಗಳಲ್ಲಿರುವ ಕಲಾಭಿರುಚಿಯ ಸಾಮರ್ಥ್ಯವನ್ನು ಸಾಬೀತು ಮಾಡಲು ಇದೊಂದು ಉತ್ತಮ ವೇದಿಕೆಯಾಗಿದೆ ಎಂದರು. ಶಿಕ್ಷಣಾಧಿಕಾರಿಗಳ ಸಂಘದ ಅಧ್ಯಕ್ಷ ಎಸ್.ಕೆ. ಹವಾಲ್ದಾರ, ಎಸ್‌ಡಿಎಮ್‌ಸಿ ಅಧ್ಯಕ್ಷ ಮುಸ್ತಾಕ್ ಅಹ್ಮದ್ ಶಿರಹಟ್ಟಿ, ಮುಖ್ಯ ಶಿಕ್ಷಕಿ ಅಂಬಿಕಾ ಕೆ.ಎಸ್, ಸದಸ್ಯರಾದ ದರವೇಶ ನಾಲಬಂದ, ಆದಮ್ ನಾಯಕ, ಅಬ್ದುಲ್ ಕೆ.ಗುಡಗೇರಿ, ಸಾಹೇಬಜಾನ ಹವಾಲ್ದಾರ, ರಾಘವೇಂದ್ರ ಜೋಶಿ, ಬಿ.ಎಸ್. ಹರ್ಲಾಪುರ, ಚಂದ್ರಕಾಂತ ನೇಕಾರ, ಬಿ.ಎಂ. ಯರಗುಪ್ಪಿ ಸೇರಿ ಕ್ಲಸ್ಟರಿನ ಶಿಕ್ಷಕರು ಹಾಜರಿದ್ದರು.

ಇದೇ ಸಂದರ್ಭದಲ್ಲಿ ಶಿಕ್ಷಣ ಪ್ರೇಮಿಗಳು ಮತ್ತು ದಾನಿಗಳಾದ ಅಷ್ಪಾಕ್ ಮುಳಗುಂದ, ಇಸ್ಮಾಯಿಲ್ ಕಲ್ಬುರ್ಗಿ, ಸಲೀಂ ಕರೀಮಖಾನನವರ ಇವರನ್ನು ಸನ್ಮಾನಿಸಲಾಯಿತು. ಸಿಆರ್‌ಪಿ ಎನ್.ಎ. ಮುಲ್ಲಾ, ಎ.ಎ. ಪುಲ್ಲಿ, ಎ.ಐ. ಮಿಯಾನವರ ನಿರೂಪಿಸಿದರು.

# ನ್ಯೂಯಾರ್ಕ್ ಮೇಯರ್ ಆಗಿ ಪ್ರಮಾಣವಚನ ಸ್ವೀಕರಿಸಿದ ಜೋಹ್ರಾನ್ ಮಮ್ದಾನಿ

■ ವಿಜಯಸಾಕ್ಷಿ ಸುದ್ದಿ, ನ್ಯೂಯಾರ್ಕ್

ಗುರುವಾರ ಮಧ್ಯರಾತ್ರಿಯ ನಂತರ ನ್ಯೂಯಾರ್ಕ್ ನಗರದ ಮೇಯರ್ ಆಗಿ ಜೋಹ್ರಾನ್ ಮಮ್ದಾನಿ ಪ್ರಮಾಣವಚನ ಸ್ವೀಕರಿಸಿದರು. ಮ್ಯಾನ್‌ಹ್ಯಾಟನ್‌ನಲ್ಲಿರುವ ಐತಿಹಾಸಿಕ, ನಿಷ್ಕ್ರಿಯ ಸುರಂಗಮಾರ್ಗ ನಿಲ್ದಾಣದಲ್ಲಿ ಪ್ರಮಾಣವಚನ ಸ್ವೀಕರಿಸಿ ಗಮನ ಸೆಳೆದರು.

ಡೆಮೋಕ್ರಾಟ್ ಆಗಿರುವ ಮಮ್ದಾನಿ ಅಮೆರಿಕದ ಅತಿದೊಡ್ಡ ನಗರದ ಮೊದಲ ಮುಸ್ಲಿಂ ನಾಯಕರಾಗಿ ಪ್ರಮಾಣವಚನ ಸ್ವೀಕರಿಸಿದರು. ಪ್ರಮಾಣವಚನ ಸ್ವೀಕರಿಸುವಾಗ ಕುರಾನ್ ಮೇಲೆ ಕೈ ಇಟ್ಟು, "ಇದು ನಿಜವಾಗಿಯೂ ಜೀವಮಾನದ ಗೌರವ ಮತ್ತು ಸವಲತ್ತು" ಎಂದು ಮಮ್ದಾನಿ ಸಂಕ್ಷಿಪ್ತ ಭಾಷಣದಲ್ಲಿ ಹೇಳಿದರು.

ಕಮಾನಿನ ಛಾವಣಿಗಳಿಗೆ ಹೆಸರುವಾಸಿಯಾದ ನಗರದ ಮೂಲ ನಿಲ್ದಾಣಗಳಲ್ಲಿ ಒಂದಾದ ಹಳೆಯ ಸಿಟಿ ಹಾಲ್ ಸುರಂಗಮಾರ್ಗ ನಿಲ್ದಾಣದಲ್ಲಿ ರಾಜಕೀಯ ಮಿತ್ರ ಲೆಟಿಟಿಯಾ ಜೇಮ್ಸ್ ಸಮಾರಂಭವನ್ನು ನಿರ್ವಹಿಸಿದರು.



ಗದಗ ಸಮೀಪದ ತಿಮ್ಮಾಪೂರ ಗ್ರಾಮದಲ್ಲಿ ಮಹಿಳೆಯರು ಹಾಗೂ ಯುವಕರು ಹೊಸ ವರ್ಷವನ್ನು ಸಂಭ್ರಮದಿಂದ ಬರಮಾಡಿಕೊಂಡರು. ಹೊಸ ವರ್ಷದ ಹಿನ್ನೆಲೆಯಲ್ಲಿ ತಮ್ಮ ಓಣಿಯನ್ನು ಸ್ವಚ್ಛಗೊಳಿಸಿ, ಪಟಾಕಿ ಸಿಡಿಸಿ ಪರಸ್ಪರ ಕೇಕ್ ವಿನಿಮಯ ಮಾಡುವುದರ ಮೂಲಕ ಹೊಸ ವರ್ಷದ ಶುಭಾಶಯಗಳನ್ನು ಹಂಚಿಕೊಂಡರು. ಈ ಸಂದರ್ಭದಲ್ಲಿ ಹುಲಿಗೆಮ್ಮ ಶಿಗರಗಡ್ಡಿ, ನಿರ್ಮಲಾ ಬಾಬರಿ, ಬಸವ್ವ ಬಿಚಗಲ್ಲ, ಪ್ರೇಮ ಬಾಬರಿ, ದ್ಯಾಮವ್ವ ಬಿಚಗಲ್ಲ, ರೇಣುಕಾ ಬಾಬರಿ, ಲಲಿತಾ ಶಿಗರಗಡ್ಡಿ, ಶಶಿಕಲಾ, ಈರಮ್ಮ, ದೇವಮ್ಮ, ಅಕ್ಕವ್ವ ಅಳವುಂಡಿ, ರಮೇಶ, ಸ್ನೇಹ, ಮನೋಜ, ಅನ್ವಿತ ಮುಂತಾದವರು ಪಾಲ್ಗೊಂಡಿದ್ದರು.

# ಪತ್ರಕರ್ತನ ಪ್ರಶ್ನೆಗೆ ಬೇಜವಬ್ದಾರಿ ಉತ್ತರ ಕೊಟ್ಟ ಬಿಜೆಪಿ ಸಚಿವ : ತೀವ್ರ ಆಕ್ರೋಶದ ಬಳಿಕ ಕ್ಷಮೆಯಾಚನೆ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಕಲುಷಿತ ನೀರು ಕುಡಿದು ಜನರು ಸಾವನ್ನಪ್ಪಿದ್ದಕ್ಕೆ ಸಂಬಂಧಿಸಿದಂತೆ ಪ್ರಶ್ನೆ ಕೇಳಿದ ಎನ್‌ಡಿಟಿವಿಯ ವರದಿಗಾರನನ್ನು ನಿಂದಿಸಿದ ಮತ್ತು ಬೇಜವಬ್ದಾರಿ ಹೇಳಿಕೆ ನೀಡಿದ ಮಧ್ಯಪ್ರದೇಶ ನಗರಾಭಿವೃದ್ಧಿ ಮತ್ತು ವಸತಿ ಸಚಿವ ಹಾಗೂ ಬಿಜೆಪಿಯ ಹಿರಿಯ ನಾಯಕ ಕೈಲಾಶ್ ವಿಜಯವರ್ಗೀಯ ವಿರುದ್ಧ ತೀವ್ರ ಆಕ್ರೋಶ ವ್ಯಕ್ತವಾಗಿದೆ.


ವಿಜಯವರ್ಗೀಯ ಅವರ ಸ್ವಕ್ಷೇತ್ರ ಇಂದೋರ್-1ರ ವ್ಯಾಪ್ತಿಯಲ್ಲಿ ಬರುವ ಭಾಗೀರಥಪುರ ಪ್ರದೇಶದಲ್ಲಿ ಕಲುಷಿತ ನೀರು ಕುಡಿದು ಏಳೆಂಟು ಜನರು ಸಾವನ್ನಪ್ಪಿದ ಮತ್ತು ಸಾವಿರಕ್ಕೂ ಹೆಚ್ಚು ಜನರು ಅನಾರೋಗ್ಯಕ್ಕೆ ಒಳಗಾಗಿ ಆಸ್ಪತ್ರೆ ಸೇರಿದ ಬಗ್ಗೆ ಬುಧವಾರ (ಡಿ.31) ವರದಿಯಾಗಿದೆ.

ಈ ಕುರಿತು ವಿಜಯವರ್ಗೀಯ ಅವರನ್ನು ಎನ್‌ಡಿಟಿವಿ ವರದಿಗಾರ ಅನುರಾಗ್ ದ್ವಾರಿ ಪ್ರಶ್ನಿಸಿದ್ದರು. ಘಟನೆಗೆ ಕಿರಿಯ ಮತ್ತು ತಳಮಟ್ಟದ ಅಧಿಕಾರಿಗಳನ್ನು ಮಾತ್ರ ಏಕೆ ಹೊಣೆಗಾರರನ್ನಾಗಿ ಮಾಡಲಾಗುತ್ತಿದೆ? ನಗರಾಭಿವೃದ್ಧಿ ಸಚಿವರಾದ ನೀವು ಮತ್ತು ಜಲಸಂಪನ್ಮೂಲ ಸಚಿವೆ ತುಳಸಿ ಸೇರಿದಂತೆ ಸಚಿವರು, ಹಿರಿಯ ನಾಯಕರು ಮತ್ತು ಅಧಿಕಾರಿಗಳನ್ನು ಏಕೆ ಹೊಣೆ ಮಾಡಲಾಗುತ್ತಿಲ್ಲ ಎಂದು ಕೇಳಿದ್ದರು.

ತಮ್ಮ ಸಂಬಂಧಿಕರನ್ನು ಕಳೆದುಕೊಂಡ ಹಾಗೂ ಸಂಬಂಧಿಕರು ಅನಾರೋಗ್ಯಕ್ಕೆ ತುತ್ತಾಗಿರುವ ಕುಟುಂಬಗಳಿಗೆ ಪರಿಹಾರ ಒದಗಿಸುವಲ್ಲಿ ವಿಳಂಬವಾಗಿದೆ ಎಂದಿದ್ದರು.

ಇಷ್ಟಕ್ಕೆ ಕೋಪಗೊಂಡ ವಿಜಯವರ್ಗೀಯ, ವರದಿಗಾರನ ಪ್ರಶ್ನೆ 'ಅಸಂಬಂಧ; (ಟಿಂಟಿ-ಜಟಿಜ)ಎಂದು ಹೇಳಿದ್ದಾರೆ. ಇದು 'ಅನುಪಯುಕ್ತ' ಎಂದಿದ್ದಾರೆ.

# ಅಮರಶಿಲ್ಪಿ ಜಕಣಾಚಾರ್ಯರ ಕೊಡುಗೆ ಅಪಾರ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಅಮರಶಿಲ್ಪಿ ಜಕಣಾಚಾರ್ಯರು ಶಿಲ್ಪಕಲಾ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಿದ್ದಾರೆ ಎಂದು ಹರ್ತಿ ಗ್ರಾಮ ಪಂಚಾಯಿತಿ ಪಿಡಿಓ ಎಸ್.ಆರ್. ಸೋಮಣ್ಣವರ ಹೇಳಿದರು.

ಅವರು ಸಮಿಪದ ಹರ್ತಿ ಗ್ರಾ.ಪಂ ಕಾರ್ಯಾಲಯದಲ್ಲಿ ಅಮರಶಿಲ್ಪಿ ಜಕಣಾಚಾರ್ಯರ ಜಯಂತಿ ಅಂಗವಾಗಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿ, ಕರ್ನಾಟಕದ ಪ್ರಮುಖ ದೇವಾಲಯಗಳಾದ ಬೇಲೂರು, ಹಳೆಬೀಡು, ಸೋಮನಾಥಪುರ ಸೇರಿದಂತೆ ನಾಡಿನಾದ್ಯಾಂತ ಹಲವಾರು ದೇವಾಲಯಗಳ ನಿರ್ಮಾಣದಲ್ಲಿ ಅಮರಶಿಲ್ಪಿ ಜಕಣಾಚಾರ್ಯ ಸಾಕಷ್ಟು ಕೊಡುಗೆ ನೀಡಿದ್ದಾರೆ. ಇಂತಹ ಮಹಾನ್ ವ್ಯಕ್ತಿಯ ವಾಸ್ತು ಶಿಲ್ಪಕಲೆಗಳು ಇಂದಿಗೂ ಪ್ರಸ್ತುತವಾಗಿವೆ ಎಂದರು.

ಗ್ರಾ.ಪಂ ಅಧ್ಯಕ್ಷೆ ಹಾಲವ್ವ ಕುರಿ, ಉಪಾಧ್ಯಕ್ಷ ರೇಣವ್ವ ತಳವಾರ, ಸೋಮರೆಡ್ಡಿ ನಡವೂರ, ಪಾರ್ವತೆವ್ವ ಕುರ್ತಕೋಟಿ, ಚನ್ನಬಸನಗೌಡ ಪಾಟೀಲ, ಫಕ್ಕೀರವ್ವ ಮರಿದೇವರಮಠ, ಯಲ್ಲಪ್ಪ ತಿಪ್ಪಣ್ಣವರ, ಮಹೇಶ ಪಟ್ಟಣಶೆಟ್ಟಿ, ಗಂಗಪ್ಪಾ ಗಡಾದ, ಕೃಷ್ಣಾ ನಾಗಲೋಟಿ, ಪ್ರಕಾಶ ಕುರ್ತಕೋಟಿ, ಯಲ್ಲಪ್ಪ ಕೋರಿ, ನೀಲವ್ವ ಡಂಬಳ, ನೀತಾ ಸಂಶಿ, ಕಸ್ತೂರೆವ್ವ ಬಂಡಿವಡ್ಡರ, ದೇವಕ್ಕ ಅಸುಂಡಿ, ಮಾಹಾದೇವಿ ಬಳಿಗೇರ, ವಿಶ್ವಕರ್ಮ ಸಮಾಜದ ಅಶೋಕ ಕಮ್ಮಾರ, ಆನಂದ ಕಮ್ಮಾರ, ಗಣೇಶ ಕಮ್ಮಾರ, ಆನಂದ ಬಡಿಗೇರ, ಕಾಳಪ್ಪ ಕಮ್ಮಾರ, ಮುತ್ತಣ್ಣಾ ಬಡಿಗೇರ, ಶಿವನಾಗಪ್ಪ ಬಡಿಗೇರ ಇದ್ದರು.

# ಸಹಕಾರ ಸಂಘಕ್ಕೆ ಅವಿರೋಧ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಪು.ಬಡ್ನಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಆಡಳಿತ ಮಂಡಳಿಗೆ ಗುರುವಾರ ನಡೆದ ಚುನಾವಣೆಯಲ್ಲಿ ಅಧ್ಯಕ್ಷರಾಗಿ 4ನೇ ಬಾರಿಗೆ ಸತೀಶಗೌಡ ಶಂಕರಗೌಡ ಪಾಟೀಲ ಮತ್ತು ಉಪಾಧ್ಯಕ್ಷರಾಗಿ ಫಕ್ಕೀರಪ್ಪ ಮರಿಹೊಳಲಣ್ಣವರ ಅವಿರೋಧವಾಗಿ ಆಯ್ಕೆಯಾದರು. ಒಟ್ಟು 12 ನಿರ್ದೇಶಕರ ಸ್ಥಾನಗಳೂ ಅವಿರೋಧ ಆಯ್ಕೆಯಾದವು.

ನಿರ್ದೇಶಕರಾಗಿ ದೇವಪ್ಪ ಕೊರಕನವರ, ಶಿವಪುತ್ರಪ್ಪ ಚೋಟಗಲ್, ಶೇಖಪ್ಪ ಕರೆಣ್ಣೆವರ, ಹಸನಸಾಬ ಭಾವಿಕಟ್ಟಿ, ದ್ರಾಕ್ಷಾಯಿಣವ್ವ ಅತ್ತಿಗೇರಿ, ಲಲಿತಾ ಹರದಗಟ್ಟಿ, ಹಾಲಪ್ಪ ಸೂರಣಗಿ, ಕುಮಾರಸ್ವಾಮಿ ಹಿರೇಮಠ, ಹನಮಂತಪ್ಪ ಮಾದರ, ನಾಗಪ್ಪ ಮಸೂತಿ ಅವರು ಅವಿರೋಧ ಆಯ್ಕೆಯಾದರು. ಕೆಸಿಸಿ ಬ್ಯಾಂಕ್ ನಿರ್ದೇಶಕ ಜಿ.ವಿ. ಪಾಟೀಲ ಇದ್ದರು. ಚುನಾವಣಾಧಿಕಾರಿಯಾಗಿ ಸಹಕಾರ ಅಭಿವೃದ್ಧಿ ಅಧಿಕಾರಿ ಬಿ.ಆರ್. ನಿಡಗುಂದಿ ಕಾರ್ಯ ನಿರ್ವಹಿಸಿದರು.

ಲಕ್ಷ್ಮೇಶ್ವರ ತಾಲೂಕು ಪು.ಬಡ್ನಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸೊಸೈಟಿಯ ಅಧ್ಯಕ್ಷರಾಗಿ ಸತತ 4ನೇ ಬಾರಿ ಮಾಜಿ ಶಾಸಕ ಶಂಕರಗೌಡ ಪಾಟೀಲ ಅವರ ಪುತ್ರ ಸತೀಶಗೌಡ ಪಾಟೀಲ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.



## ನಿಡಗುಂದಿಕೊಪ್ಪದಲ್ಲಿ ಪುಣ್ಯಸ್ಮರಣೋತ್ಸವ ನಾಳೆ






■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ನಿಡಗುಂದಿಕೊಪ್ಪ ಶಾಖಾ ಶಿವಯೋಗ ಮಂದಿರದ ಲಿಂ. ಚನ್ನಬಸವ ಸ್ವಾಮೀಜಿಗಳ 42ನೇ ಹಾಗೂ ಲಿಂ. ಶಿವಬಸವ ಸ್ವಾಮೀಜಿಗಳ 10ನೇ ಪುಣ್ಯಸ್ಮರಣೋತ್ಸವ ಸಮಾರಂಭವನ್ನು ಜ. 3ರಂದು ಹಮ್ಮಿಕೊಳ್ಳಲಾಗಿದೆ.

ಹಾಲಕೆರೆ ಸಂಸ್ಥಾನಮಠದ ಮುಪ್ಪಿನ ಬಸವಲಿಂಗ ಸ್ವಾಮೀಜಿ, ಹಾವೇರಿ ಹುಕ್ಕೇರಿಮಠದ ಸದಾಶಿವ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ರೋಣ ಗುಲಗಂಜಿಮಠದ ಗುರುಪಾದ ಸ್ವಾಮೀಜಿ, ಶಾಖಾ ಶಿವಯೋಗಮಂದಿರದ ಅಭಿನವ ಚನ್ನಬಸ ಸ್ವಾಮೀಜಿ ನೇತೃತ್ವ ವಹಿಸುವರು. ಶಾಸಕ ಜಿ.ಎಸ್. ಪಾಟೀಲ, ಮಾಜಿ ಸಚಿವ ಕಳಕಪ್ಪ ಬಂಡಿ, ವಿ.ಪ ಸದಸ್ಯ ಎಸ್.ವಿ. ಸಂಕನೂರ, ಕ್ಷೇತ್ರ ಶಿಕ್ಷಣಾಧಿಕಾರಿ ಎ.ಎನ್. ಕಾಂಬೋಗಿ, ನಿವೃತ್ತ ಪ್ರಾಚಾರ್ಯ ಶೇಖರಪ್ಪ ಕಲಕಬಂಡಿ, ವೀರಣ್ಣ ಸೊಬಗಿನ, ಆನಂದ ಕೊಪ್ಪದ, ರುದ್ರಪ್ಪ ಬೆಲ್ಲದ ಮುಂತಾದವರು ಆಗಮಿಸಲಿದ್ದಾರೆ ಎಂದು ಶ್ರೀಮಠದ ಪ್ರಕಟಣೆ ತಿಳಿಸಿದೆ.

---

**ಇನಾಂ ವೀರಾಪುರ ಗ್ರಾಮಕ್ಕೆ ಸಚಿವ ಡಾ. ಎಚ್.ಸಿ. ಮಹದೇವಪ್ಪ ಭೇಟಿ, ಕುಟುಂಬಸ್ಥರಿಗೆ ಚೆಕ್ ವಿತರಣೆ**

# ಮೂಲಭೂತ ಹಕ್ಕಿನ ಉಲ್ಲಂಘನೆಗೆ ಖಂಡನೆ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಹುಬ್ಬಳ್ಳಿ ತಾಲೂಕಿನ ಇನಾಂ ವೀರಾಪುರ ಗ್ರಾಮಕ್ಕೆ ಸಮಾಜ ಕಲ್ಯಾಣ ಸಚಿವರಾದ ಡಾ. ಎಚ್.ಸಿ. ಮಹದೇವಪ್ಪ ಭೇಟಿ ನೀಡಿ, ಕುಟುಂಬಸ್ಥರಿಗೆ ಸಾಂತ್ವನ ಹೇಳಿ, ಧೈರ್ಯ ತುಂಬಿದರಲ್ಲದೆ, ಘಟನೆಯ ಕುರಿತು ಕುಟುಂಬಸ್ಥರಿಂದ ಮಾಹಿತಿ ಪಡೆದುಕೊಂಡರು.



ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಯಸ್ಸಿಗೆ ಬಂದ ಗಂಡು-ಹೆಣ್ಣು ಮದುವೆಯಾಗಿದ್ದಾರೆ. ಡಾ. ಬಿ.ಆರ್. ಅಂಬೇಡ್ಕರ್ ಅವರು ವಯಸ್ಸಿಗೆ ಬಂದ ಹೆಣ್ಣು ತನ್ನ ಇಚ್ಛೆಗೆ ಅನುಗುಣವಾಗಿ ನಡೆಯಬಹುದು ಎಂದು ಹೇಳಿದ್ದಾರೆ. ವಯಸ್ಕ ಮಹಿಳೆ ತನ್ನ ಸಂಗಾತಿಯನ್ನು ಅವಳ ವಿವೇಕ, ಭರವಸೆ ಮತ್ತು ಇಷ್ಟಪಟ್ಟಿರುವ ವ್ಯಕ್ತಿಯನ್ನು ಮದುವೆಯಾಗಬಹುದು ಎಂದು ಅಂಬೇಡ್ಕರ್ ಅವರು ಹಿಂದೂ ಕೋಡ್ ಬಿಲ್‌ನಲ್ಲಿ ವಿವರಿಸಿದ್ದಾರೆ. ಸ್ವ-ಇಚ್ಛೆಯಂತೆ ತಾನು ಇಷ್ಟಪಟ್ಟಿರುವ ವ್ಯಕ್ತಿಯನ್ನು ಮದುವೆಯಾಗುವುದು ಮೂಲಭೂತ ಹಕ್ಕಾಗಿದ್ದು, ಈ ಘಟನೆಯಲ್ಲಿ ಮೂಲಭೂತ ಹಕ್ಕಿನ ಸಂಪೂರ್ಣ ಉಲ್ಲಂಘನೆಯಾಗಿದೆ. ಗರ್ಭಿಣಿ ಮಹಿಳೆಯನ್ನು ಅವರ ಕುಟುಂಬದವರೇ ಕೊಲೆ ಮಾಡಿರುವುದು ಅತ್ಯಂತ ಮೃಗೀಯ ಘಟನೆಯಾಗಿದೆ. ತಪ್ಪಿತಸ್ಥರ ವಿರುದ್ಧ ಕ್ರಮಗಳನ್ನು ಕೈಗೊಳ್ಳುವಂತೆ ಮುಖ್ಯಮಂತ್ರಿಗಳು, ಗೃಹ ಮಂತ್ರಿಗಳು, ಸಚಿವರು, ಶಾಸಕರು ಅಧಿಕಾರಿಗಳಿಗೆ ಈಗಾಗಲೇ ತಿಳಿಸಿದ್ದಾರೆ ಎಂದರು.

ಮಾನ್ಯಾ ಪ್ರಕರಣದಂತಹ ಪ್ರಕರಣಗಳು ರಾಜ್ಯದಲ್ಲಿ ಮರುಕಳಿಸಬಾರದು. ಮಾನ್ಯಾ ಹೆಸರಿನಲ್ಲಿ ಕಾಯ್ದೆ ಜಾರಿಗೆ ತರುವ ನಿಟ್ಟಿನಲ್ಲಿ ಮುಂದಿನ ಅಧಿವೇಶನದಲ್ಲಿ ಕ್ರಮ ವಹಿಸಲಾಗುವುದು. ಸರ್ಕಾರದಿಂದ ಈಗಾಗಲೇ 5 ಲಕ್ಷ ರೂ ಹಣವನ್ನು ನೀಡಲಾಗಿದೆ ಎಂದು ತಿಳಿಸಿದರು. ಕುಟುಂಬದ 8 ಸದಸ್ಯರಿಗೆ ತಲಾ 2 ಲಕ್ಷದಂತೆ ಒಟ್ಟಾರೆ 16 ಲಕ್ಷ ರೂ ಮೊತ್ತದ ಚೆಕ್ ವಿತರಿಸಲಾಯಿತು.

ಬಳಿಕ ಹುಬ್ಬಳ್ಳಿಯ ವಿವೇಕಾನಂದ ಆಸ್ಪತ್ರೆಗೆ ಭೇಟಿ ನೀಡಿದ ಸಚಿವ ಡಾ. ಎಚ್.ಸಿ. ಮಹಾದೇವಪ್ಪ, ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ವಿವೇಕಾನಂದ ದೊಡ್ಡಮನಿ ಅವರ ತಾಯಿ ರೇಣವ್ವ ದೊಡ್ಡಮನಿಯವರ ಆರೋಗ್ಯ ಹಾಗೂ ಚಿಕಿತ್ಸೆ ಕುರಿತು ವೈದ್ಯರಿಂದ ಮಾಹಿತಿ ಪಡೆದುಕೊಂಡರು. ಉತ್ತಮ ಚಿಕಿತ್ಸೆ, ಔಷಧಿ ನೀಡುವಂತೆ ವೈದ್ಯರಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಅಬ್ಬಯ್ಯ ಪ್ರಸಾದ್, ಶಾಸಕರಾದ ಎನ್.ಎಚ್. ಕೋನರಡ್ಡಿ, ಎಫ್.ಎಚ್. ಜಕ್ಕಪ್ಪನವರ, ಸಮಾಜ ಕಲ್ಯಾಣ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ರಣದೀಪ ಡಿ, ಆಯುಕ್ತರಾದ ರಾಕೇಶ ಕುಮಾರ, ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ಉಪವಿಭಾಗಾಧಿಕಾರಿ ಶಾಲಂ ಹುಸೇನ್,

ಹುಬ್ಬಳ್ಳಿ ಗ್ರಾಮೀಣ ತಹಸೀಲ್ದಾರ ಜೆ.ಬಿ. ಮಜ್ಜಗಿ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಪಿ. ಶುಭ, ಸಹಾಯಕ ನಿರ್ದೇಶಕಿ ಪ್ರಿಯದರ್ಶಿನಿ ಹಿರೇಮಠ, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಡಾ. ರಾಮಚಂದ್ರ ಹೊಸಮನಿ, ಹುಬ್ಬಳ್ಳಿ ಗ್ರಾಮೀಣ ಪೊಲೀಸ್ ಠಾಣೆಯ ಇನ್ಸಪೆಕ್ಟರ್ ಮುರುಗೇಶ ಚನ್ನಣ್ಣವರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ದಲಿತ ಸಂಘಗಳ ಮುಖಂಡರು ಉಪಸ್ಥಿತರಿದ್ದರು.

---

# ಪರೀಕ್ಷೆಗೆ ಧೈರ್ಯದಿಂದ ಸಿದ್ಧರಾಗಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಇಲ್ಲಿನ ಎಫ್.ಎಂ. ಡಬಾಲಿ ಸಂಯುಕ್ತ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ಶಿಕ್ಷಣಶಾಸ್ತ್ರ ವಿಷಯದ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗಾಗಿ ಪ್ರಶ್ನೆಪತ್ರಿಕೆ ಬಿಡಿಸುವ ಕಾರ್ಯಾಗಾರ ಹಮ್ಮಿಕೊಳ್ಳಲಾಗಿತ್ತು.



ಕಾರ್ಯಾಗಾರದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಎಂ.ಸಿ. ಭಜಂತ್ರಿ ಮಾತನಾಡಿ, ವಿದ್ಯಾರ್ಥಿಗಳು ಯಾವುದೇ ಒತ್ತಡಕ್ಕೆ ಒಳಗಾಗದೆ ಧೈರ್ಯದಿಂದ ಪರೀಕ್ಷೆಯನ್ನು ಬರೆಯಬೇಕು. ಹೊಸ ಪ್ರಶ್ನೆಪತ್ರಿಕೆಯ ಮಾದರಿಯನ್ನು ಸರಿಯಾಗಿ ಅರ್ಥೈಸಿಕೊಂಡು ಪರೀಕ್ಷೆಗೆ ಪೂರ್ವ ಸಿದ್ಧತೆಯನ್ನು ಮಾಡಿಕೊಳ್ಳಬೇಕು. ವಿದ್ಯಾರ್ಥಿಗಳು ಇಂತಹ ಕಾರ್ಯಾಗಾರದ ಸದುಪಯೋಗವನ್ನು ಪಡೆದುಕೊಂಡು ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕಗಳೊಂದಿಗೆ ಸಫಲತೆಯನ್ನು ಪಡೆಯಬೇಕು ಎಂದರು.

ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ಗದುಗಿನ ಎಚ್‌ಸಿಇಎಸ್ ಪದವಿಪೂರ್ವ ಕಾಲೇಜಿನ ಶಿಕ್ಷಣ ಶಾಸ್ತ್ರ ಉಪನ್ಯಾಸಕರಾದ ಸುನಂದಾ ಪವಾರ್ ಮಾತನಾಡುತ್ತಾ, ವಿದ್ಯಾರ್ಥಿಗಳು ಇಂತಹ ಕಾರ್ಯಾಗಾರದ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದರು.

ಎಫ್.ಎಂ. ಡಬಾಲಿ ಕಾಲೇಜಿನ ಶಿಕ್ಷಣ ಶಾಸ್ತ್ರ ಉಪನ್ಯಾಸಕರಾದ ಸುಧಾ ಹುಚ್ಚಣ್ಣವರ ಮಾತನಾಡಿ, ವಿದ್ಯಾರ್ಥಿಗಳು ಎಲ್ಲ ವಿಷಯಗಳ ಕಾರ್ಯಾಗಾರದ ಸದುಪಯೋಗವನ್ನು ಪಡೆದುಕೊಳ್ಳಬೇಕು. ಅಂಕಗಳಿಕೆಯೊಂದೇ ಮುಖ್ಯವಲ್ಲ. ಅಂಕಗಳ ಜೊತೆಗೆ ನೈತಿಕ ಮೌಲ್ಯಗಳು ಜೀವನದಲ್ಲಿ ಅನ್ವಯವಾಗಬೇಕು. ಎಲ್ಲ ವಿದ್ಯಾರ್ಥಿಗಳು ವ್ಯವಸ್ಥಿತವಾಗಿ ಅಧ್ಯಯನಶೀಲರಾಗಿ, ಆತಂಕವಿಲ್ಲದೆ ಪರೀಕ್ಷೆಯನ್ನು ಬರೆಯಬೇಕು ಎಂದರು.

ಕಾಲೇಜಿನ ಉಪನ್ಯಾಸಕರಾದ ಎನ್. ಹನುಮರೆಡ್ಡಿ, ವಾಯ್.ಎಸ್. ಪಂಗಣ್ಣವರ್, ಪಿ.ಎನ್. ಕುಲಕರ್ಣಿ, ಎಂ.ಎಂ. ನದಾಫ್, ಎಫ್.ಎ. ಬಾಬುಖಾನವರ, ಪಿ.ವಿ. ಹೊಸೂರ್ ಮುಂತಾದವರು ಉಪಸ್ಥಿತರಿದ್ದರು. ಉಪನ್ಯಾಸಕ ಬಸವರಾಜ್ ಶಿರುಂದ ವಂದಿಸಿದರು. ಕಾಲೇಜಿನ ಪ್ರಾಚಾರ್ಯರಾದ ಎಮ್.ಸಿ. ಭಜಂತ್ರಿ ಹಾಗೂ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ ಸುನಂದಾ ಪವಾರ್ ಅವರನ್ನು ಗೌರವಿಸಲಾಯಿತು.

---

## ಗ್ಯಾರಂಟಿ ಯೋಜನೆಗಳು ರಾಜ್ಯದ ಅಭಿವೃದ್ಧಿಗೆ ಪೂರಕ



■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ರಾಜ್ಯ ಸರ್ಕಾರ ಜಾರಿಗೊಳಿಸಿರುವ ಪಂಚಗ್ಯಾರಂಟಿ ಯೋಜನೆಗಳು ರಾಜ್ಯದ ಅಭಿವೃದ್ಧಿಗೆ ಪೂರಕವಾಗಿವೆ ಎಂದು ಕರ್ನಾಟಕ ವಿಧಾನ ಪರಿಷತ್ತಿನ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್ ಹೇಳಿದರು.

ಗುರುವಾರ ಸರ್ಕ್ಯೂಟ್ ಹೌಸ್‌ನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ರಾಜ್ಯ ಸರ್ಕಾರ ಅನುಷ್ಠಾನಗೊಳಿಸಿರುವ ಐದು ಗ್ಯಾರಂಟಿ ಯೋಜನೆಗಳು ಸಮಾಜದ ಎಲ್ಲ ವರ್ಗದವರಿಗೆ ತಲುಪುತ್ತಿವೆ. ಸರ್ವರಿಗೂ ಸಮಪಾಲು ಸರ್ವರಿಗೂ ಸಮಬಾಳು ಎಂಬ ತತ್ವದಡಿ ಸರ್ಕಾರ ಕಾರ್ಯನಿರ್ವಹಿಸುತ್ತಿದೆ. ಸರ್ಕಾರದ ಯೋಜನೆಗಳು ನೇರವಾಗಿ ಜನರಿಗೆ ತಲುಪುತ್ತಿವೆ. ಶಕ್ತಿ ಯೋಜನೆ ಮೂಲಕ ಮಹಿಳಾ ಸಬಲೀಕರಣಕ್ಕೆ ಒತ್ತು ನೀಡಲಾಗಿದೆ. ಈಗಾಗಲೇ 600 ಕೋಟಿಗೂ ಅಧಿಕ ಮಹಿಳೆಯರು ಶಕ್ತಿ ಯೋಜನೆಯಡಿ ಉಚಿತವಾಗಿ ಪ್ರಯಾಣ ಮಾಡಿದ್ದಾರೆ. ಅನ್ನಭಾಗ್ಯ, ಗೃಹಲಕ್ಷ್ಮೀ, ಗೃಹ ಜ್ಯೋತಿ ಹಾಗೂ ಯುವ ನಿಧಿ ಯೋಜನೆಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗಿದೆ. ಮುಂದಿನ ವರ್ಷಗಳಲ್ಲಿ ಸಹ ಯೋಜನೆಗಳನ್ನು ಯಶಸ್ವಿಯಾಗಿ ಮುಂದುವರಿಸಲಾಗುವುದು ಎಂದರು.


ಪತ್ರಿಕಾಗೋಷ್ಠಿಯಲ್ಲಿ ಮುಖಂಡರಾದ ಅನಿಲಕುಮಾರ ಪಾಟೀಲ, ಚಂದ್ರಶೇಖರ ಜುಟ್ಟಲ ಸೇರಿದಂತೆ ಇತರರು ಹಾಜರಿದ್ದರು.

---

## ಕರ್ನಾಟಕ ಪಶ್ಚಿಮ ಪದವೀಧರರ ಮತಕ್ಷೇತ್ರ ಅಂತಿಮ ಮತದಾರರ ಪಟ್ಟಿ ಪ್ರಕಟ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತ ಚುನಾವಣಾ ಆಯೋಗದ ವೇಳಾಪಟ್ಟಿಯಂತೆ 01.11.2025ಕ್ಕೆ ಅನ್ವಯವಾಗುವಂತೆ ಕರ್ನಾಟಕ ವಿಧಾನ ಪರಿಷತ್ತಿನ ಪಶ್ಚಿಮ ಪಧವೀದರರ ಮತಕ್ಷೇತ್ರದ ಮತದಾರರ ಪಟ್ಟಿಯನ್ನು ಪ್ರಕಟಿಸಲು ನಿರ್ದೇಶನ ನೀಡಲಾಗಿತ್ತು. ಅದರಂತೆ, 25.11.2025ರಂದು ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲಾಗಿದೆ.



25.11.2025ರಿಂದ 10.12.2025ರವರೆಗೆ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿತ್ತು. ಸದರಿ ಅವಧಿಯಲ್ಲಿ ಸ್ವೀಕರಿಸಲಾದ ಅರ್ಜಿಗಳ ಪರಿಶೀಲನೆಯ ನಂತರ, ಪಶ್ಚಿಮ ಪಧವೀದರರ ಮತಕ್ಷೇತ್ರದ ಅಂತಿಮ ಮತದಾರರ ಪಟ್ಟಿಯನ್ನು 30.12.2025ರಂದು ಪ್ರಕಟಿಸಲಾಗಿದೆ. ಸದರಿ ಅಂತಿಮ ಮತದಾರರ ಪಟ್ಟಿಯು ಮತದಾರರ ನೋಂದಣಿ ಅಧಿಕಾರಿಗಳಾದ ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿ ಹಾಗೂ ಸಹಾಯಕ ಮತದಾರರ ನೋಂದಣಾಧಿಕಾರಿಗಳಾದ ಜಿಲ್ಲಾಧಿಕಾರಿಗಳು ಧಾರವಾಡ, ಗದಗ, ಹಾವೇರಿ ಮತ್ತು ಉತ್ತರಕನ್ನಡ ಜಿಲ್ಲೆ ಇವರ ಕಚೇರಿಯಲ್ಲಿ ಹಾಗೂ ಅವರ ವ್ಯಾಪ್ತಿಯಲ್ಲಿ ಬರುವ ಎಲ್ಲ ನಿಯೋಜಿತ ಅಧಿಕಾರಿಗಳ ಕಚೇರಿಗಳಲ್ಲಿ ಲಭ್ಯವಿರುತ್ತದೆ. ಅದೇ ರೀತಿ ಮುಖ್ಯ ಚುನಾವಣಾಧಿಕಾರಿಗಳು ಬೆಂಗಳೂರು ಇವರ www.ceokarnataka.kar.nic.in ವೆಬ್‌ಸೈಟ್‌ನಲ್ಲಿ ಹಾಗೂ ಕಾರ್ಯಾಲಯದ ವೆಬ್‌ಸೈಟ್ https://rcbelagavi.karnataka.gov.in ನಲ್ಲಿಯೂ ಲಭ್ಯವಿದೆ.

ಪಶ್ಚಿಮ ಪಧವೀದರರ ಮತಕ್ಷೇತ್ರದ ಚುನಾವಣೆಗೆ ಸಂಬಂಧಿಸಿದಂತೆ ಅಂತಿಮ ಮತದಾರರ ಪಟ್ಟಿಯಲ್ಲಿ 51,599 ಪುರುಷ ಮತದಾರರು ಮತ್ತು 36,488 ಮಹಿಳಾ ಮತದಾರರು ಸೇರಿದಂತೆ ಒಟ್ಟು 88,087 ಮತದಾರರು ಇರುತ್ತಾರೆ.

ಅಂತಿಮ ಮತದಾರರ ಪಟ್ಟಿಯಲ್ಲಿ ತಪ್ಪಿಹೋದ ಅರ್ಹ ಪದವೀಧರರು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ಸೇರ್ಪಡೆ ಮಾಡಲು ಚುನಾವಣೆಗೆ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸುವ ಕೊನೆಯ ದಿನಾಂಕಕ್ಕೆ 10 ದಿನಗಳ ಮೊದಲು ಅರ್ಜಿ ಸಲ್ಲಿಸಬಹುದಾಗಿದೆ. ಮತದಾರರ ನೋಂದಣಿ ಹಾಗೂ ನವೀಕರಣ ಪ್ರಕ್ರಿಯೆ ನಿರಂತರವಾಗಿ ನಡೆಯುವುದು ಎಂದು ಕರ್ನಾಟಕ ಪಶ್ಚಿಮ ಪದವೀಧರರ ಮತಕ್ಷೇತ್ರ ಮತದಾರರ ನೋಂದಣಾಧಿಕಾರಿಗಳು ಹಾಗೂ ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಕೆ.ಎಮ್. ಜಾನಕಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

**ಖರೀದಿ ಕೇಂದ್ರದಲ್ಲಿ ರೈತರಿಂದ ಹಣ ವಸೂಲಿ ಆರೋಪ; ಆಡಳಿತ ಮಂಡಳಿಯ ಸ್ಪಷ್ಟನೆ**

# ಖರೀದಿ ಕೇಂದ್ರದಲ್ಲಿ ಹಣದ ವ್ಯವಹಾರ ನಡೆದಿಲ್ಲ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಟಿಎಪಿಸಿಎಂಎಸ್‌ನ ಗೋವಿನಜೋಳ ಬೆಂಬಲ ಬೆಲೆ ಖರೀದಿ ಕೇಂದ್ರದಲ್ಲಿ ರೈತರಿಂದ ಹಣ ವಸೂಲಿ ಮಾಡುತ್ತಿದ್ದಾರೆ ಎಂದು ರೈತ ಸಂಘಟನೆಗಳ ಮುಖಂಡರು ಮಾಡಿರುವ ಆರೋಪ ಸತ್ಯಕ್ಕೆ ದೂರವಾಗಿದೆ. ಅಂತಹ ಯಾವುದೇ ಹಣದ ವ್ಯವಹಾರ ಖರೀದಿ ಕೇಂದ್ರದಲ್ಲಿ ನಡೆದಿಲ್ಲ, ಆರೋಪ ನಿರಾಧಾರವಾಗಿದೆ ಎಂದು ಟಿಎಪಿಸಿಎಂಎಸ್ ಆಡಳಿತ ಮಂಡಳಿಯವರು ಸ್ಪಷ್ಟನೆ ನೀಡಿದ್ದಾರೆ.



ಈ ಕುರಿತು ಗುರುವಾರ ಟಿಎಪಿಸಿಎಂಎಸ್ ಆಡಳಿತ ಮಂಡಳಿ ಅಧ್ಯಕ್ಷ ಸೋಮೇಶ ಉಪನಾಳ ಅವರ ಅಧ್ಯಕ್ಷತೆಯಲ್ಲಿ ಸಭೆ ನಡೆಸಿ, ಪತ್ರಿಕಾ ಪ್ರಕಟನೆ ನೀಡಿದ್ದಾರೆ. ರೈತ ಸಂಘಟನೆಗಳ ಹೋರಾಟದ ಫಲವಾಗಿ ರಾಜ್ಯಾದ್ಯಂತ ಮೆಕ್ಕೆಜೋಳದ ಬೆಂಬಲ ಬೆಲೆ ಖರೀದಿ ಕೇಂದ್ರ ಪ್ರಾರಂಭವಾಗಿವೆ. ಆದರೆ ಅತೀ ಹೆಚ್ಚು ನೋಂದಣಿಯಾಗಿದ್ದು ಲಕ್ಷ್ಮೇಶ್ವರ ಕೇಂದ್ರಿಂದ. ಇಥೆನಾಲ್ ಕಂಪನಿ 243, ಪೌಲ್ಟ್ರಿ 651 ಮತ್ತು ಕೆಎಂಎಫ್ 770 ರೈತರ ನೋಂದಣಿ ಆಗಿರುತ್ತದೆ. ಈಗಾಗಲೇ 777 ಟನ್‌ನಷ್ಟು ಖರೀದಿಯಾಗಿದೆ. ಖರೀದಿ ಕೇಂದ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಯಾವುದೇ ಸಿಬ್ಬಂದಿಯಾಗಲಿ, ಆಯಾ ಸಂಸ್ಥೆಯ ಗ್ರೇಡರ್ ಆಗಲಿ ಯಾರೊಂದಿಗೂ ಹಣಕಾಸಿನ ವ್ಯವಹಾರ ಮಾಡಿಲ್ಲ. ವಿನಾಕಾರಣ ಆರೋಪ ಮಾಡುವುದು ಸರಿಯಲ್ಲ.

ಗೋವಿನಜೋಳ ಬೆಳೆದ ಇನ್ನೂ ಸಾವಿರಾರು ರೈತರ ನೋಂದಣಿಗಾಗಿ ಕಾಯುತ್ತಿದ್ದಾರೆ. ಮಾರಾಟ ಮಾಡಿದ ರೈತರ ಖಾತೆಗಳಿಗೆ ಹಣ ಜಮಾ ಆಗಬೇಕಿದೆ.

ಖರೀದಿ ಪ್ರಕ್ರಿಯೆ ತ್ವರಿತಗೊಳ್ಳಬೇಕಿದೆ. ಕೆಎಂಎಫ್‌ನಲ್ಲಿ ನೋಂದಣಿಯಾದ ರೈತರ ಮಾಲನ್ನು ಲಕ್ಷ್ಮೇಶ್ವರದಲ್ಲಿಯೇ ಖರೀದಿಸಬೇಕಾಗಿದ್ದು, ರೈತರ ಪರವಾದ ಬೇಡಿಕೆಗಳಿಗೆ ರೈತ ಸಂಘಟನೆಗಳು ಮತ್ತು ಆಡಳಿತ ಮಂಡಳಿಯವರು ಮುಂದಾಗೋಣ. ಹೊರತಾಗಿ ಯಾವುದೇ ದುರುದ್ದೇಶ ಇಟ್ಟುಕೊಂಡು ಸುಳ್ಳು ಆರೋಪ ಮಾಡಿ ಹೆಸರು ಕೆಡಿಸುವ ಕಾರ್ಯ ಮಾಡುವುದು ಸರಿಯಲ್ಲ ಎಂಬ ಅಭಿಪ್ರಾಯವನ್ನು ಆಡಳಿತ ಮಂಡಳಿ ತಿಳಿಸಿದೆ.

ಉಪಾಧ್ಯಕ್ಷ ಶೇಖಣ್ಣ ಕಾಳೆ, ನಿರ್ದೇಶಕರುಗಳಾದ ಸುನೀಲ ಮಹಾಂತಶೆಟ್ಟರ, ವಿರೂಪಾಕ್ಷಪ್ಪ ಪಡಗೇರಿ, ವೀರಭದ್ರಪ್ಪ ಶಿಗ್ಲಿ, ಬಸವರಾಜ ವಾಲೀಕಾರ, ರೈತರಾದ ಕರಿಯಪ್ಪ ಹುರಕನವರ, ಬಸವರಾಜ ಪುಠಾಣಿ, ರಮೇಶ ಬಿಂಕದಕಟ್ಟಿ, ಬಸವರಾಜ ಹಾದಿಮನಿ, ಪ್ರದೀಪ ಮರಿಹೊಳಣ್ಣವರ, ವಿರೂಪಾಕ್ಷಪ್ಪ ಆದಿ, ಬಸವರಾಜ ಮೆಣಸಿನಕಾಯಿ ಮುಂತಾದವರು ಸಭೆಯಲ್ಲಿ ಹಾಜರಿದ್ದರು.

---

# ವಿಶೇಷ ಕಾನೂನು ರಚನೆಗೆ ಸರ್ಕಾರದಿಂದ ಕ್ರಮ

▸▸ ಮೊದಲನೇ ಪುಟದಿಂದ

ವಿಷಾದನೀಯ. ಆರೋಪಿಗಳಿಗೆ ತಕ್ಕ ಶಿಕ್ಷೆಯಾಗಬೇಕು. ಘಟನೆ ಜರುಗಿದ ದಿನದಿಂದ ಪೊಲೀಸ್, ಜಿಲ್ಲಾಡಳಿತ ಹಾಗೂ ಸಮಾಜ ಕಲ್ಯಾಣ ಇಲಾಖೆ ಅಗತ್ಯ ಕ್ರಮವಹಿಸಿವೆ. ಮುಂದಿನ ದಿನಗಳಲ್ಲಿ ಇಂತಹ ಘಟನೆಗಳು ಜರುಗದಂತೆ ಅಧಿಕಾರಿಗಳು ಮುನ್ನೆಚ್ಚರಿಕೆ ವಹಿಸಬೇಕೆಂದು ಹೇಳಿದರು.

ಸಭೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಡಿ. ರಂದೀಪ್ ಮತ್ತು ಆಯುಕ್ತ ಡಾ. ರಾಕೇಶಕುಮಾರ ಅವರು ಪ್ರಕರಣದ ತನಿಖೆ ಮತ್ತು ಸರ್ಕಾರದ ಕಾಯ್ದೆ, ಕಾನೂನುಗಳ ಬಗ್ಗೆ ವಿವರಿಸಿದರು.

ಜಿಲ್ಲಾಧಿಕಾರಿ ದಿವ್ಯ ಪ್ರಭು ಮಾತನಾಡಿ, ಇನಾಂವೀರಾಪೂರ ಗ್ರಾಮದ ಪ್ರಕರಣದಲ್ಲಿ ಎಲ್ಲ ಇಲಾಖೆಗಳು ಸೂಕ್ತ ಕ್ರಮ ವಹಿಸಿವೆ. ಜಿಲ್ಲಾಡಳಿತ, ಪೊಲೀಸ್ ಮತ್ತು ಸಮಾಜ ಕಲ್ಯಾಣ ಇಲಾಖೆ ನಿಯಮಾನುಸಾರ ಪರಿಹಾರ ಹಾಗೂ ಸಂತ್ರಸ್ತ ಕುಟುಂಬಕ್ಕೆ ನೆರವು ನೀಡಲಾಗಿದ್ದು, ಅವರಿಗೆ ಅವಶ್ಯಕ ಗೃಹೋಪಯೋಗಿ ಸಾಮಗ್ರಿಗಳನ್ನು ತಲುಪಿಸಲಾಗಿದೆ ಎಂದು ತಿಳಿಸಿದರು.

ವೇದಿಕೆಯಲ್ಲಿ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯ (ಡಿಸಿಆರ್‌ಇ) ಬೆಳಗಾವಿ ವಿಭಾಗದ ಪೊಲೀಸ್ ವರಿಷ್ಠಾಧಿಕಾರಿ ರವೀಂದ್ರ ಗಡಾದ, ಉಪ ಪೊಲೀಸ್ ಆಯುಕ್ತ ಮಹಾನಿಂಗ ನಂದಗಾವಿ, ಪ್ರೊಬೇಷನರಿ ಐಎಎಸ್ ಅಧಿಕಾರಿ ರಿತೀಕಾ ವರ್ಮಾ ಉಪಸ್ಥಿತರಿದ್ದರು.

ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಪಿ. ಶುಭ ಸ್ವಾಗತಿಸಿ, ಸಭೆಯನ್ನು ನಿರ್ವಹಿಸಿದರು. ಸಭೆಯಲ್ಲಿ ಉಪವಿಭಾಗಾಧಿಕಾರಿ ಶಾಲಂ ಹುಸೇನ್, ಡಿವೈಎಸ್‌ಪಿ ವಿನೋದ ಮುಕ್ತೆದಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಡಾ. ಎಚ್.ಎಚ್.ಕುಕನೂರ, ಪ್ರಶಾಂತ ಸಿದ್ದನಗೌಡರ ಸೇರಿದಂತೆ ಅವಳಿ ನಗರದ ಎಲ್ಲ ಸಹಾಯಕ ಪೊಲೀಸ್ ಆಯುಕ್ತರು, ಪೊಲೀಸ್ ಇನ್ಸ್‌ಪೆಕ್ಟರ್ ಮುರಗೇಶ ಚನ್ನಣ್ಣವರ, ಎಲ್ಲ ತಾಲೂಕಿನ ತಹಸೀಲ್ದಾರರು, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಭಾಗವಹಿಸಿದ್ದರು.

---

## ಇಂದೋರ್ ಕಲುಷಿತ ನೀರು ಸೇವನೆ ಪ್ರಕರಣ: ಹತ್ತಕ್ಕೇರಿದ ಸಾವಿನ ಸಂಖ್ಯೆ; ಇಬ್ಬರು ಅಧಿಕಾರಿಗಳು ಅಮಾನತು

■ವಿಜಯಸಾಕ್ಷಿ ಸುದ್ದಿ, ಇಂದೋರ್

ಮಧ್ಯಪ್ರದೇಶದ ಇಂದೋರ್‌ನಲ್ಲಿ ಕಲುಷಿತ ನೀರು ಸೇವನೆಯಿಂದ ಕನಿಷ್ಠ 10 ಮಂದಿ ಸಾವನ್ನಪ್ಪಿದ ಕಾರಣ ಓರ್ವ ಅಧಿಕಾರಿಯನ್ನು ವಜಾಗೊಳಿಸಲಾಗಿದ್ದು, ಇತರ ಇಬ್ಬರನ್ನು ಅಮಾನತುಗೊಳಿಸಲಾಗಿದೆ. ಪುರಸಭೆಯಿಂದ ಸರಬರಾಜು ಮಾಡಲಾದ ಕಲುಷಿತ ಕುಡಿಯುವ ನೀರನ್ನು ಸೇವಿಸಿ 2,000 ಕ್ಕೂ ಹೆಚ್ಚು ಜನರು ಅಸ್ವಸ್ಥರಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಮೃತರಲ್ಲಿ ಬುಧವಾರ ನಿಧನರಾದ ಆರು ತಿಂಗಳ ಶಿಶು ಮತ್ತು ಆರು ಮಹಿಳೆಯರು ಸೇರಿದ್ದಾರೆ.

ಕಳೆದ ವಾರದಲ್ಲಿ, ಇಂದೋರ್‌ನ ಭಾಗೀರಥಪುರ ಪ್ರದೇಶದ 100 ಕ್ಕೂ ಹೆಚ್ಚು ನಿವಾಸಿಗಳು ಪುರಸಭೆ ಸರಬರಾಜು ಮಾಡುತ್ತಿದ್ದ ನೀರು ಕುಡಿದು ಆಸ್ಪತ್ರೆಗಳಿಗೆ ದಾಖಲಾಗಿದ್ದಾರೆ. ಆಡಳಿತವು ಅಧಿಕೃತವಾಗಿ ಸಾವಿನ ಸಂಖ್ಯೆಯನ್ನು ದೃಢಪಡಿಸದಿದ್ದರೂ, ಹಿರಿಯ ಜಿಲ್ಲಾ ಅಧಿಕಾರಿಯೊಬ್ಬರು ಸಂಖ್ಯೆ 10 ದಾಟಿದೆ ಎಂದು ಹೇಳಿದರು. ಘಟನೆಯ ನಂತರ, ಇಂದೋರ್ ಮುನ್ಸಿಪಲ್ ಕಾರ್ಪೊರೇಷನ್ (ಐಎಂಸಿ)ನ ಸಾರ್ವಜನಿಕ ಆರೋಗ್ಯ ಎಂಜಿನಿಯರಿಂಗ್ (ಪಿಎಚ್‌ಇ) ಇಲಾಖೆಯ ಉಸ್ತುವಾರಿ ಉಪ-ಎಂಜಿನಿಯರ್ ಶುಭಂ ಶ್ರೀವಾಸ್ತವ ಅವರನ್ನು ವಜಾಗೊಳಿಸಲಾಯಿತು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka